ಸತ್ಯ ಮತ್ತು ಧೈರ್ಯದ ಧ್ವನಿ

ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 ಸಂಚಿಕೆ: Issue: 129 ರಾಯಚೂರು Raichur 31-10-2026 ಶನಿವಾರ Saturday ಪುಟ : Page: 04 ಬೆಲೆ: Price: ₹ 2.00 Postal Reg No.: RCR/L/RNP/95/2025-27 tungabimba@gmail.com ಸಂಪಾದಕರು : ಗುರುರಾಜ ಕೆ Editor: Gururaja K 98863 85685



ಹೆಲಿಕಾಪ್ಟರ್ ದುರಂತ: ಕರ್ನಾಟಕದ ಐವರು ಸೇರಿ ಆರು ಮಂದಿ ಸಾವು

ಚಮೋಲಿ, ಅ.30: ಉತ್ತರಾಖಂಡದ ಚಮೋಲಿ ಜಿಲ್ಲೆಯಲ್ಲಿ ಶುಕ್ರವಾರ ಸಂಭವಿಸಿದ ಭೀಕರ ಹೆಲಿಕಾಪ್ಟರ್ ಅಪಘಾತದಲ್ಲಿ ಕರ್ನಾಟಕದ ಐವರು ಹಾಗೂ ಪೈಲಟ್ ಸೇರಿದಂತೆ ಒಟ್ಟು ಆರು ಮಂದಿ ಮೃತಪಟ್ಟಿದ್ದಾರೆ. ಜೋಶಿಮಠ ಸಮೀಪದ ಪರ್ವತ ಪ್ರದೇಶದಲ್ಲಿ ಹೆಲಿಕಾಪ್ಟರ್ ಪತನಗೊಂಡಿದ್ದು, ಸ್ಥಳದಲ್ಲಿ ಸುಟ್ಟು ಕರಕಲಾದ ಸ್ಥಿತಿಯಲ್ಲಿ ಮೃತದೇಹಗಳು ಪತ್ತೆಯಾಗಿವೆ.

ಜೋಶಿಮಠದ ಹಾಥಿ ಕಣಿವೆ ಪ್ರದೇಶದ ಚಾಯ್ ಗ್ರಾಮದ ಸಮೀಪ ಹೆಲಿಕಾಪ್ಟರ್ ಪತನಗೊಂಡಿದೆ. ಸಂಪರ್ಕ ಕಡಿತಗೊಂಡ ಹೆಲಿಕಾಪ್ಟರ್‌ಗಾಗಿ ಶೋಧ ನಡೆಸುತ್ತಿದ್ದ ರಕ್ಷಣಾ ತಂಡಗಳಿಗೆ ಅರಣ್ಯ ಪ್ರದೇಶದಲ್ಲಿ ಹೊಗೆ ಕಾಣಿಸಿಕೊಂಡಿದೆ. ತಕ್ಷಣ ಸ್ಥಳಕ್ಕೆ ತೆರಳಿ ಪರಿಶೀಲಿಸಿದಾಗ ಹೆಲಿಕಾಪ್ಟರ್‌ನ ಅವಶೇಷಗಳು ಚದುರಿಬಿದ್ದಿರುವುದು ಕಂಡುಬಂದಿದೆ. ಅಪಘಾತದಲ್ಲಿ ಹೆಲಿಕಾಪ್ಟರ್‌ನಲ್ಲಿದ್ದ ಎಲ್ಲ ಆರು ಮಂದಿ ಮೃತಪಟ್ಟಿರುವುದನ್ನು ಸ್ಥಳೀಯ ಪೊಲೀಸರು ದೃಢಪಡಿಸಿದ್ದಾರೆ.

ಮೃತರನ್ನು ಪೈಲಟ್ ಕ್ಯಾಪ್ಟನ್ ಹಿಮಾಂಶು ಸಬರ್ವಾಲ್ (48), ಬೆಂಗಳೂರಿನ ಸಿಸಿಬಿ ಇನ್‌ಸ್ಪೆಕ್ಟರ್ ಅರುಣ್ ಸಾಲಂಕೆ (44), ವಿ.ಬಿ. ಶಂಕರಗೌಡ (39), ಹಾಸನ ಜಿಲ್ಲೆಯ ಬಾಚಿಹಳ್ಳಿ ಮೂಲದ ಪ್ರತಾಪ್ ಗೌಡ (49), ತುಮಕೂರು ಜಿಲ್ಲೆಯ ಹುಲಿಯೂರುದುರ್ಗದ ಎಚ್.ಎನ್. ನಟರಾಜು (51) ಹಾಗೂ ಸುಧೀರ್ ಎಂದು ಗುರುತಿಸಲಾಗಿದೆ.

ಮೃತರಾದ ಐವರು ಕರ್ನಾಟಕದವರಾಗಿದ್ದು, ಸ್ನೇಹಿತರೊಂದಿಗೆ ಚಾರ್‌ಧಾಮ್ ಯಾತ್ರೆಗೆ ತೆರಳಿದ್ದರು ಎಂದು ತಿಳಿದುಬಂದಿದೆ. ಧಾರ್ಮಿಕ ಪ್ರವಾಸದ ಸಂದರ್ಭದಲ್ಲಿ ಸಂಭವಿಸಿದ ಈ



ದುರಂತ ಐದು ಕುಟುಂಬಗಳಲ್ಲಿ ಶೋಕ ಮಡುಗಟ್ಟುವಂತೆ ಮಾಡಿದೆ.

ಬೆಂಗಳೂರಿನಲ್ಲಿ ಸಿಸಿಬಿ ಇನ್‌ಸ್ಪೆಕ್ಟರ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದ ಅರುಣ್ ಸಾಲಂಕೆ ಅವರು ತಮ್ಮ ಸ್ನೇಹಿತರೊಂದಿಗೆ ಪ್ರವಾಸಕ್ಕೆ ತೆರಳಿದ್ದರು. ಅವರು ಪತ್ನಿ ಹಾಗೂ ಇಬ್ಬರು ಮಕ್ಕಳನ್ನು ಅಗಲಿದ್ದಾರೆ. ಅವರ ಅಕಾಲಿಕ ನಿಧನದಿಂದ ಕುಟುಂಬಸ್ಥರು, ಸ್ನೇಹಿತರು ಹಾಗೂ ಪೊಲೀಸ್ ಇಲಾಖೆಯ ಸಹೋದ್ಯೋಗಿಗಳಲ್ಲಿ ದುಃಖ ಮನೆಮಾಡಿದೆ.

ಮೃತರಲ್ಲಿ ಒಬ್ಬರಾದ ವಿ.ಬಿ. ಶಂಕರಗೌಡ ಅವರು ತುಮಕೂರು ಮೂಲದವರಾಗಿದ್ದು, ಹೈಕೋರ್ಟ್ ವಕೀಲರಾಗಿ ವೃತ್ತಿ ನಿರ್ವಹಿಸುತ್ತಿದ್ದರು. 2ನೇ ಪುಟಕ್ಕೆ

ನಿಂತಿದ್ದ ಲಾರಿಗೆ ಟಿಟಿ ವಾಹನ ಡಿಕ್ಕಿ: ಓರ್ವನ ಸ್ಥಿತಿ ಗಂಭೀರ, 13 ಮಂದಿಗೆ ಗಾಯ

ಸಿಂಧನೂರು: ತಾಲೂಕಿನ ಅರಗಿನಮರದ ಸಮೀಪ ಶುಕ್ರವಾರ ಬೆಳಿಗ್ಗೆ ರಸ್ತೆ ಬದಿಯಲ್ಲಿ ನಿಂತಿದ್ದ ಲಾರಿಗೆ ಪ್ರವಾಸಿಗರನ್ನು ಕರೆದೊಯ್ಯುತ್ತಿದ್ದ ಟಿಟಿ ವಾಹನ ಡಿಕ್ಕಿ ಹೊಡೆದ ಪರಿಣಾಮ ಓರ್ವ ಗಂಭೀರವಾಗಿ ಗಾಯಗೊಂಡಿದ್ದು, ಇತರ 13 ಮಂದಿಗೆ ಸಣ್ಣಪುಟ್ಟ ಗಾಯಗಳಾಗಿವೆ.

ರಾಯಚೂರು ನಗರದ ಕುಂಬಾರ ಓಣಿಯ ನಿವಾಸಿಗಳು ಟಿಟಿ ವಾಹನದಲ್ಲಿ ಸಿಂಧನೂರು ಮಾರ್ಗವಾಗಿ ಹಾಸನಕ್ಕೆ ಪ್ರವಾಸ ತೆರಳುತ್ತಿದ್ದ ವೇಳೆ ಈ ಅಪಘಾತ ಸಂಭವಿಸಿದೆ.

ಪ್ರಯಾಣದ ಮಧ್ಯೆ ಟಿಟಿ ವಾಹನದಲ್ಲಿ ತಾಂತ್ರಿಕ ದೋಷ ಕಾಣಿಸಿಕೊಂಡಿದ್ದು, ಚಾಲಕನ ನಿಯಂತ್ರಣ ತಪ್ಪಿದ ವಾಹನ ರಸ್ತೆ ಬದಿಯಲ್ಲಿ ನಿಲುಗಡೆ ಮಾಡಿದ್ದ ಲಾರಿಗೆ ಡಿಕ್ಕಿ ಹೊಡೆದಿದೆ ಎನ್ನಲಾಗಿದೆ.

ಅಪಘಾತದಲ್ಲಿ ನವೀನ್ ಕುಮಾರ್ ಎಂಬುವವರು ಗಂಭೀರವಾಗಿ ಗಾಯಗೊಂಡಿದ್ದು, ವಾಹನದಲ್ಲಿದ್ದ ಉಳಿದ 13 ಮಂದಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಗಾಯಾಳುಗಳನ್ನು ಸಿಂಧನೂರು



ನಗರದ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಿಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಸಂಚಾರಿ ಠಾಣೆಯ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅಪಘಾತಕ್ಕೆ ವಾಹನದಲ್ಲಿನ ತಾಂತ್ರಿಕ ದೋಷವೇ ಕಾರಣವೇ ಅಥವಾ ಇತರ ಅಂಶಗಳು ಕಾರಣವಾಗಿವೆಯೇ ಎಂಬುದರ ಕುರಿತು ತನಿಖೆ ಕೈಗೊಂಡಿದ್ದಾರೆ.

ಈ ಸಂಬಂಧ ಸಿಂಧನೂರು ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಶಿಕ್ಷಣದೊಂದಿಗೆ ಮಕ್ಕಳಲ್ಲಿ ಸಂಸ್ಕಾರ, ಧಾರ್ಮಿಕ ಮೌಲ್ಯ ಬೆಳೆಸಬೇಕು: ಕಾಶಿ ಜಗದ್ಗುರು



ಜಾಲಹಳ್ಳಿ: ಮಕ್ಕಳಿಗೆ ಶೈಕ್ಷಣಿಕ ಜ್ಞಾನ ನೀಡುವುದರ ಜತೆಗೆ ಉತ್ತಮ ಸಂಸ್ಕೃತಿ, ಸಂಸ್ಕಾರ ಹಾಗೂ ಧಾರ್ಮಿಕ ಮೌಲ್ಯಗಳನ್ನು ಬೋಧಿಸುವುದು ಪೋಷಕರ ಪ್ರಮುಖ ಜವಾಬ್ದಾರಿಯಾಗಿದೆ. ಶಿಕ್ಷಣದೊಂದಿಗೆ ನೈತಿಕ ಮೌಲ್ಯಗಳನ್ನು ಮೈಗೂಡಿಸಿಕೊಂಡಾಗ ಮಾತ್ರ ಮಕ್ಕಳು ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಲು ಸಾಧ್ಯ ಎಂದು ಕಾಶಿ ಜಗದ್ಗುರು ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಭಗವತ್ಪಾದರು ಹೇಳಿದರು.



ಸಮೀಪದ ಲಿಂಗದಹಳ್ಳಿ ಗ್ರಾಮದ ಶ್ರೀ ಪರಮಾನಂದ ದೇವಸ್ಥಾನದ ಆವರಣದಲ್ಲಿ ಶುಕ್ರವಾರ ಆಯೋಜಿಸಿದ್ದ ಇಷ್ಟಲಿಂಗ ಮಹಾಪೂಜೆ ಹಾಗೂ ಧರ್ಮಸಭೆಯಲ್ಲಿ ಆಶೀರ್ವಚನ ನೀಡಿದ ಅವರು, ಮಕ್ಕಳಲ್ಲಿ ಬಾಲ್ಯದಿಂದಲೇ ಧಾರ್ಮಿಕ ಪ್ರಜ್ಞೆ, ಮಾನವೀಯತೆ ಹಾಗೂ ಸನ್ನಡತೆಯನ್ನು ಬೆಳೆಸುವ ಅಗತ್ಯವಿದೆ ಎಂದು ತಿಳಿಸಿದರು.

ಇಷ್ಟಲಿಂಗ ಪೂಜೆ ಕೇವಲ ಧಾರ್ಮಿಕ ಆಚರಣೆಗೆ ಸೀಮಿತವಾಗಿಲ್ಲ. ಅದು ಮನುಷ್ಯನ ಅಂತರಂಗದಲ್ಲಿರುವ ದೈವತ್ವವನ್ನು ಅರಿಯುವ ಸಾಧನವಾಗಿದೆ. ಮನಸ್ಸಿನ ಶುದ್ಧತೆ, ಏಕಾಗ್ರತೆ ಹಾಗೂ ಆಧ್ಯಾತ್ಮಿಕ ಚಿಂತನೆಗೆ ಇಷ್ಟಲಿಂಗ ಪೂಜೆ ಸಹಕಾರಿಯಾಗುತ್ತದೆ. ವೀರಶೈವ ಲಿಂಗಾಯತ ಧರ್ಮದ ತತ್ವಗಳನ್ನು ಅರಿತು ಪ್ರತಿಯೊಬ್ಬರೂ ನಿತ್ಯ ಜೀವನದಲ್ಲಿ ಇಷ್ಟಲಿಂಗ ಪೂಜೆಗೆ ಮಹತ್ವ ನೀಡಬೇಕು ಎಂದು ಕರೆ ನೀಡಿದರು.

ಲಿಂಗದಹಳ್ಳಿಯ ಶ್ರೀ ಪರಮಾನಂದ ದೇವಸ್ಥಾನವು ಪವಿತ್ರ ಧಾರ್ಮಿಕ ಕ್ಷೇತ್ರವಾಗಿದ್ದು, ಭಕ್ತರ ನಂಬಿಕೆ ಮತ್ತು ಶ್ರದ್ಧೆಯ ಕೇಂದ್ರವಾಗಿದೆ. ಶಿವಪಾರ್ವತಿಯರ ಸಾನ್ನಿಧ್ಯವಿರುವ ಈ ಕ್ಷೇತ್ರವು ಮುಂದಿನ ದಿನಗಳಲ್ಲಿ ಪ್ರಮುಖ ಧಾರ್ಮಿಕ ಕೇಂದ್ರವಾಗಿ ಅಭಿವೃದ್ಧಿ ಹೊಂದಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ದೇವಾಪುರದ ಶ್ರೀಗಳು ಸತತ ಒಂಬತ್ತು ದಿನಗಳ ಕಾಲ ಮೌನವ್ರತ ಆಚರಿಸಿ ಕಠಿಣ ತಪಸ್ಸಿನಲ್ಲಿ ತೊಡಗಿರುವುದು ವಿಶೇಷವಾಗಿದೆ. ಅವರ ತಪಸ್ಸು ಹಾಗೂ ಧಾರ್ಮಿಕ ಕಾರ್ಯಗಳಿಗೆ ಗ್ರಾಮಸ್ಥರು ಒಗ್ಗಟ್ಟಿನಿಂದ ಸಹಕಾರ ನೀಡಿರುವುದು ಶ್ಲಾಘನೀಯ. ಇಂತಹ ಕಾರ್ಯಕ್ರಮಗಳು ಜನರಲ್ಲಿ ಭಕ್ತಿಭಾವ, ಪರಸ್ಪರ ಪ್ರೀತಿ ಹಾಗೂ ಸಾಮಾಜಿಕ ಸಾಮರಸ್ಯವನ್ನು ವೃದ್ಧಿಸಲು ನೆರವಾಗುತ್ತವೆ ಎಂದು ಹೇಳಿದರು.

ಧರ್ಮಸಭೆಯಲ್ಲಿ ಮಾತನಾಡಿದ ಜಯಶಾಂತಲಿಂಗೇಶ್ವರ ಮಹಾಸ್ವಾಮಿಗಳು, ಲಿಂಗದಹಳ್ಳಿ ಬೆಟ್ಟವು ಸುಮಾರು 68 ಎಕರೆ ಪ್ರದೇಶದಲ್ಲಿ ವ್ಯಾಪಿಸಿದ್ದು, ಆಧ್ಯಾತ್ಮಿಕ ಮಹತ್ವ ಹೊಂದಿರುವ ಪುಣ್ಯಕ್ಷೇತ್ರವಾಗಿದೆ. ಇಂತಹ ಪವಿತ್ರ ಸ್ಥಳಕ್ಕೆ ಕಾಶಿ ಜಗದ್ಗುರುಗಳು ಆಗಮಿಸಿ ಆಶೀರ್ವಚನ ನೀಡಿರುವುದು ಈ ಭಾಗದ ಭಕ್ತರಿಗೆ ವಿಶೇಷ ಸಂತಸ ತಂದಿದೆ ಎಂದರು.

ಜಗದ್ಗುರುಗಳ ಆಗಮನದಿಂದ ಲಿಂಗದಹಳ್ಳಿ, ಜಾಲಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಭಕ್ತರಲ್ಲಿ ಧಾರ್ಮಿಕ ಜಾಗೃತಿ ಮತ್ತು ಆಧ್ಯಾತ್ಮಿಕ ಚಿಂತನೆಗೆ ಮತ್ತಷ್ಟು ಪ್ರೇರಣೆ ದೊರೆಯಲಿದೆ ಎಂದು ಅಭಿಪ್ರಾಯಪಟ್ಟರು.

ಗುರುವಾರ ಸಂಜೆ ಲಿಂಗದಹಳ್ಳಿ ಗ್ರಾಮಕ್ಕೆ ಆಗಮಿಸಿದ ಕಾಶಿ ಜಗದ್ಗುರುಗಳನ್ನು ಗ್ರಾಮಸ್ಥರು ಭವ್ಯವಾಗಿ ಸ್ವಾಗತಿಸಿದರು. ನೂರಾರು ಸುಮಂಗಲಿಯರು ಕುಂಭಕಳಸ ಹೊತ್ತು ಮೆರವಣಿಗೆಯಲ್ಲಿ ಪಾಲ್ಗೊಂಡರು. ಜಗದ್ಗುರುಗಳನ್ನು ಸಾರೋಟಿನಲ್ಲಿ ಮೆರವಣಿಗೆ ಮೂಲಕ ಕರೆತರಲಾಯಿತು. ಭಕ್ತರ ಜಯಘೋಷ ಹಾಗೂ ಧಾರ್ಮಿಕ ಸಂಭ್ರಮದ ನಡುವೆ ನಡೆದ ಸ್ವಾಗತ ಕಾರ್ಯಕ್ರಮ ಗಮನ ಸೆಳೆಯಿತು.

ಬಳಿಕ ಇಷ್ಟಲಿಂಗ ಮಹಾಪೂಜೆ ಸೇರಿದಂತೆ ವಿವಿಧ ಧಾರ್ಮಿಕ ವಿಧಿವಿಧಾನಗಳು ಹಾಗೂ ಧರ್ಮಸಭೆ ನೆರವೇರಿದವು. ಎರಡು ದಿನಗಳ ಕಾಲ ನಡೆದ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸಿದ್ದ ಭಕ್ತರು ಭಾಗವಹಿಸಿದ್ದರು.

ಶ್ರೀ ಲಿಂಗದಹಳ್ಳಿ ಪರಮಾನಂದ ದೇವಸ್ಥಾನದ ಜನಕಲ್ಯಾಣ ಟ್ರಸ್ಟ್ ಅಧ್ಯಕ್ಷ ಮಹಾಂತಯ್ಯ ಸ್ವಾಮಿ ಹಾಗೂ ಟ್ರಸ್ಟ್‌ನ ಸರ್ವಸದಸ್ಯರ ನೇತೃತ್ವದಲ್ಲಿ ಲಿಂಗದಹಳ್ಳಿ ಗ್ರಾಮಸ್ಥರು ಮತ್ತು ಸುತ್ತಮುತ್ತಲಿನ ಭಕ್ತರ ಸಹಕಾರದೊಂದಿಗೆ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ದೇವಾಪುರದ ಶಿವಮೂರ್ತಿ ಸ್ವಾಮೀಜಿ, ಗಬ್ಬೂರಿನ ಬೂದಿಬಸವ ಸ್ವಾಮೀಜಿ, ಗುಂಡಕ್ಕನ್ನಾಳದ ಗುರುಲಿಂಗ ಸ್ವಾಮೀಜಿ, ಸುಲ್ತಾನಪುರದ ಶಂಭು ಸೋಮನಾಥ ಸ್ವಾಮೀಜಿ, ಮುಖಂಡರಾದ ಮಹಾಂತಯ್ಯ ಸ್ವಾಮಿ ಲಿಂಗದಹಳ್ಳಿ, ಸಂಜೀವರಡ್ಡಿ ಸಾಹುಕಾರ, ವೆಂಕಟರಾವ್ ಬೆನಕನ, ವೆಂಕನಗೌಡ ನವಿಲುಗುಡ್ಡ, ವೀರಣ್ಣ ಪಾಣಿ ಸಾಹು, ಹನುಮಂತಿ ಶಿವಬಸಪ್ಪ ರಾಂಪಳ್ಳಿ, ಯಲ್ಲಮ್ಮ ಮಲ್ಲಪ್ಪ ಗಣಜಲಿ ಸೇರಿದಂತೆ ಅನೇಕ ಗಣ್ಯರು, ಗ್ರಾಮಸ್ಥರು ಹಾಗೂ ಭಕ್ತರು ಉಪಸ್ಥಿತರಿದ್ದರು.

ಅಂಭಾ ಭವಾನಿ ಶ್ರೀಮಠದ ಅಭಿವೃದ್ಧಿಗೆ ₹1 ಕೋಟಿ ನೀಡುವುದಾಗಿ ಬಸನಗೌಡ ದದ್ದಲ್ ಘೋಷಣೆ

ಸಿಂಧನೂರು: ತಾಲೂಕಿನ ಪ್ರಸಿದ್ಧ ಅಂಭಾ ಭವಾನಿ ಶ್ರೀಮಠದ ಅಭಿವೃದ್ಧಿ ಕಾರ್ಯಗಳಿಗೆ ₹1 ಕೋಟಿ ನೆರವು ನೀಡುವುದಾಗಿ ರಾಯಚೂರು ಗ್ರಾಮಾಂತರ ಶಾಸಕ ಬಸನಗೌಡ ದದ್ದಲ್ ಘೋಷಿಸಿದರು.

ತಾಲೂಕಿನ ಅಂಭಾ ಭವಾನಿ ಶ್ರೀಮಠದಲ್ಲಿ ಶಿಲಾಮೂರ್ತಿಗಳ ಪ್ರತಿಷ್ಠಾಪನೆ ಹಾಗೂ ಶಿಲಾಮಂಟಪದ ಲೋಕಾರ್ಪಣೆ ಅಂಗವಾಗಿ ಶ್ರೀಶೈಲ ಮಹಾಪೀಠದ ಜಗದ್ಗುರು ಡಾ. ಚನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯ ಮಹಾಭಗವತ್ಪಾದರ ದಿವ್ಯ ಸಾನ್ನಿಧ್ಯದಲ್ಲಿ ಆಯೋಜಿಸಿದ್ದ ಧರ್ಮಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಅಂಭಾ ಭವಾನಿ ಶ್ರೀಮಠವು ಅಪಾರ ಭಕ್ತರ ಶ್ರದ್ಧೆ ಮತ್ತು ನಂಬಿಕೆಯ ಕೇಂದ್ರವಾಗಿದೆ. ಭಕ್ತಿಭಾವದಿಂದ ದೇವಿಯನ್ನು ಆರಾಧಿಸಿ ಪ್ರಾರ್ಥನೆ ಸಲ್ಲಿಸುವ ಭಕ್ತರ ಇಷ್ಟಾರ್ಥಗಳನ್ನು ಈಡೇರಿಸುವ ಶಕ್ತಿಕ್ಷೇತ್ರ ಎಂಬ ನಂಬಿಕೆ ಜನರಲ್ಲಿದೆ. ಇಂತಹ ಪವಿತ್ರ ಧಾರ್ಮಿಕ ಕ್ಷೇತ್ರದ ಅಭಿವೃದ್ಧಿಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಹೇಳಿದರು.

ಭಾರತವು ಶರಣರು, ಸಂತರು, ಸಾಧುಗಳು ಹಾಗೂ ಮಹಾತ್ಮರ ಪುಣ್ಯಭೂಮಿಯಾಗಿದೆ. ವಿಶ್ವಕ್ಕೆ ಆಧ್ಯಾತ್ಮಿಕ ಜ್ಞಾನ ಮತ್ತು ಮಾನವೀಯ ಮೌಲ್ಯಗಳನ್ನು ಪರಿಚಯಿಸಿದ ಹೆಗ್ಗಳಿಕೆ ನಮ್ಮ ದೇಶಕ್ಕಿದೆ. ಅದರಲ್ಲಿಯೂ ಕರ್ನಾಟಕವು ಶಿವಶರಣರು, ದಾರ್ಶನಿಕರು ಹಾಗೂ ಮಹಾನ್ ಸಂತರ ಕರ್ಮಭೂಮಿಯಾಗಿದ್ದು, ಧಾರ್ಮಿಕ ಮತ್ತು ಸಾಂಸ್ಕೃತಿಕ ಪರಂಪರೆಯಲ್ಲಿ ವಿಶಿಷ್ಟ ಸ್ಥಾನ ಹೊಂದಿದೆ ಎಂದು ಅಭಿಪ್ರಾಯಪಟ್ಟರು.

ಅಂಭಾ ಭವಾನಿ ಶ್ರೀಮಠದಲ್ಲಿ ನಡೆಯುತ್ತಿರುವ ಶಿಲಾಮೂರ್ತಿಗಳ ಪ್ರತಿಷ್ಠಾಪನೆ ಹಾಗೂ ಶಿಲಾಮಂಟಪದ ಲೋಕಾರ್ಪಣೆ ಕಾರ್ಯಕ್ರಮಕ್ಕೆ ಶ್ರೀಶೈಲ ಜಗದ್ಗುರುಗಳು ಆಗಮಿಸಿ ದಿವ್ಯ ಸಾನ್ನಿಧ್ಯ ವಹಿಸಿರುವುದು ಈ ಭಾಗದ ಭಕ್ತರ ಸೌಭಾಗ್ಯವಾಗಿದೆ. ಅವರ



ಆಶೀರ್ವಾದದಿಂದ ಶ್ರೀಮಠದ ಧಾರ್ಮಿಕ ಮತ್ತು ಸಾಮಾಜಿಕ ಚಟುವಟಿಕೆಗಳು ಮತ್ತಷ್ಟು ವಿಸ್ತಾರಗೊಳ್ಳಲಿ ಎಂದು ಆಶಿಸಿದರು.

ರಾಯಚೂರು ಜಿಲ್ಲೆ ಸೇರಿದಂತೆ ರಾಜ್ಯದ ವಿವಿಧ ಭಾಗಗಳಲ್ಲಿ ಮಳೆಯ ಕೊರತೆಯಿಂದ ರೈತರು ಸಂಕಷ್ಟ ಎದುರಿಸುತ್ತಿದ್ದಾರೆ. ಬರಗಾಲದಿಂದ ಕೃಷಿ ಚಟುವಟಿಕೆಗಳಿಗೆ ಹಿನ್ನಡೆಯಾಗಿದ್ದು, ರೈತ ಕುಟುಂಬಗಳು ತೊಂದರೆ ಅನುಭವಿಸುತ್ತಿವೆ. ಜಗನ್ಮಾತೆ ಅಂಭಾ ಭವಾನಿ ಹಾಗೂ ಶ್ರೀಶೈಲ ಜಗದ್ಗುರುಗಳ ಆಶೀರ್ವಾದದಿಂದ ನಾಡಿನಲ್ಲಿ ಉತ್ತಮ ಮಳೆಯಾಗಿ ಬೆಳೆಗಳು 2ನೇ ಪುಟಕ್ಕೆ

ನರಸಿಂಹ ಶೆಟ್ಟಿ ಹತ್ಯೆ ಖಂಡಿಸಿ ಆರ್ಯವೈಶ್ಯ ಮಹಾಸಭಾದಿಂದ ಎಸ್ಪಿಗೆ ಮನವಿ: ₹50 ಲಕ್ಷ ಪರಿಹಾರಕ್ಕೆ ಆಗ್ರಹ



ರಾಯಚೂರು: ನಗರದ ಎಲ್‌ಬಿಎಸ್ ನಗರದಲ್ಲಿ ಇತ್ತೀಚೆಗೆ ನಡೆದ ಬಾಪೂರು ನರಸಿಂಹ ಶೆಟ್ಟಿ ಅವರ ಹತ್ಯೆಯನ್ನು ತೀವ್ರವಾಗಿ ಖಂಡಿಸಿರುವ ಕರ್ನಾಟಕ ಆರ್ಯವೈಶ್ಯ ಮಹಾಸಭಾ ಹಾಗೂ ಜಿಲ್ಲಾ ಸಮಿತಿ, ಆರೋಪಿಗೆ ಕಠಿಣ ಶಿಕ್ಷೆ ವಿಧಿಸುವುದರ ಜೊತೆಗೆ ಮೃತರ ಕುಟುಂಬಕ್ಕೆ ₹50 ಲಕ್ಷ ಪರಿಹಾರ ಹಾಗೂ ಸೂಕ್ತ ಪೊಲೀಸ್ ಭದ್ರತೆ ಒದಗಿಸುವಂತೆ ಒತ್ತಾಯಿಸಿದೆ.

ಕರ್ನಾಟಕ ಆರ್ಯವೈಶ್ಯ ಮಹಾಸಭಾದ ಹಿರಿಯ ಉಪಾಧ್ಯಕ್ಷ ಕುಂಟ್ನಾಳ್ ವೆಂಕಟೇಶ ಅವರ ನೇತೃತ್ವದಲ್ಲಿ ಮಹಾಸಭಾದ ಪದಾಧಿಕಾರಿಗಳು ಹಾಗೂ ಸಮಾಜದ ಮುಖಂಡರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಗೆ ತೆರಳಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಿ. ಹರೀಶ್ ಅವರಿಗೆ ಮನವಿ ಸಲ್ಲಿಸಿದರು.

ಎಲ್‌ಬಿಎಸ್ ನಗರದಲ್ಲಿ ಹೋಟೆಲ್ ವ್ಯಾಪಾರ ನಡೆಸಿಕೊಂಡು ಜೀವನ ಸಾಗಿಸುತ್ತಿದ್ದ ಬಾಪೂರು ನರಸಿಂಹ ಶೆಟ್ಟಿ ಅವರ ಹತ್ಯೆಯಿಂದ ಕುಟುಂಬ ತೀವ್ರ ಸಂಕಷ್ಟಕ್ಕೆ ಸಿಲುಕಿದೆ. ಆರ್ಥಿಕವಾಗಿ ಹಿಂದುಳಿದಿರುವ ಕುಟುಂಬವು ಆಧಾರಸ್ತಂಭವನ್ನು ಕಳೆದುಕೊಂಡು ಅತಂತ್ರ ಸ್ಥಿತಿಗೆ ತಲುಪಿದೆ. ಈ ಹಿನ್ನೆಲೆಯಲ್ಲಿ ಸರ್ಕಾರ ಮಾನವೀಯ ದೃಷ್ಟಿಯಿಂದ ಕುಟುಂಬಕ್ಕೆ ₹50 ಲಕ್ಷ ಪರಿಹಾರ ಘೋಷಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಹತ್ಯೆ ಪ್ರಕರಣದ ತನಿಖೆಯನ್ನು ನಿಷ್ಪಕ್ಷಪಾತವಾಗಿ ನಡೆಸಿ, ಆರೋಪಿಗೆ ಕಾನೂನಿನಡಿ ಗರಿಷ್ಠ ಶಿಕ್ಷೆಯಾಗುವಂತೆ ಕ್ರಮ ಕೈಗೊಳ್ಳಬೇಕು. ಆರೋಪಿಯ ಕುಟುಂಬದವರು ಅಥವಾ ಇತರರಿಂದ ಮೃತರ ಕುಟುಂಬದ ಸದಸ್ಯರಿಗೆ ಯಾವುದೇ ರೀತಿಯ ಒತ್ತಡ, ಬೆದರಿಕೆ ಎದುರಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ಪ್ರಕರಣಕ್ಕೆ ಸಂಬಂಧಿಸಿದ ಸಾಕ್ಷ್ಯಾಧಾರಗಳ ನಾಶ ಅಥವಾ ಸಾಕ್ಷಿಗಳ ಮೇಲೆ ಪ್ರಭಾವ ಬೀರುವ ಪ್ರಯತ್ನಗಳು ನಡೆಯದಂತೆ ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ನಿಗಾ ವಹಿಸಬೇಕು ಎಂದು ಒತ್ತಾಯಿಸಲಾಗಿದೆ.

ಅಲ್ಲದೆ, ಕೊಲೆ ಸೇರಿದಂತೆ ಗಂಭೀರ ಅಪರಾಧ ಪ್ರಕರಣಗಳ 2ನೇ ಪುಟಕ್ಕೆ

ಕೃಷಿ ವಿಶ್ವವಿದ್ಯಾಲಯದಲ್ಲಿ 75 ಹುದ್ದೆಗಳ ನೇಮಕಾತಿಯಲ್ಲಿ ಅಕ್ರಮ ಆರೋಪ: ತನಿಖೆಗೆ ಜೆಡಿಎಸ್ ಆಗ್ರಹ

ರಾಯಚೂರು: ರಾಯಚೂರು ಕೃಷಿ ವಿಶ್ವವಿದ್ಯಾಲಯದಲ್ಲಿ ಸರ್ಕಾರದ ನಿಯಮಾವಳಿಗಳನ್ನು ಉಲ್ಲಂಘಿಸಿ, ಆರ್ಥಿಕ ಇಲಾಖೆಯ ಅನುಮೋದನೆ ಪಡೆಯದೆ 75 ಹುದ್ದೆಗಳಿಗೆ ನೇಮಕಾತಿ ನಡೆಸಲಾಗಿದೆ ಎಂದು ಆರೋಪಿಸಿರುವ ಜೆಡಿಎಸ್ ಜಿಲ್ಲಾಧ್ಯಕ್ಷ ಎಂ. ವಿರೂಪಾಕ್ಷಿ, ನೇಮಕಾತಿ ಆದೇಶಗಳನ್ನು ತಕ್ಷಣ ತಡೆಹಿಡಿದು ಸಮಗ್ರ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.



ನಗರದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರದ ಅಧೀನ ಕಾರ್ಯದರ್ಶಿಯ ಆದೇಶ ಹಾಗೂ ನೇಮಕಾತಿಗೆ ಸಂಬಂಧಿಸಿದ ನಿಯಮಗಳನ್ನು ಗಾಳಿಗೆ ತೂರಿ ನೇಮಕಾತಿ ಪ್ರಕ್ರಿಯೆ ನಡೆಸಲಾಗಿದೆ. ಆರ್ಥಿಕ ಇಲಾಖೆಯಿಂದ ಅಗತ್ಯ ಅನುಮತಿ ಪಡೆಯದೆ ನೇಮಕಾತಿ ಮಾಡಿರುವುದರಿಂದ ಆಯ್ಕೆಯಾದ 75 ಅಭ್ಯರ್ಥಿಗಳ ಭವಿಷ್ಯ ಅತಂತ್ರ ಸ್ಥಿತಿಗೆ ಸಿಲುಕಿದೆ ಎಂದು ಆರೋಪಿಸಿದರು.

ನಿಯಮಬಾಹಿರ ನೇಮಕಾತಿಯಿಂದಾಗಿ ಅಭ್ಯರ್ಥಿಗಳ ಉದ್ಯೋಗ ಭದ್ರತೆ ಪ್ರಶ್ನಾರ್ಹವಾಗಿದೆ. ಮುಂದಿನ ದಿನಗಳಲ್ಲಿ ಅವರ ಭವಿಷ್ಯಕ್ಕೆ ಯಾರು ಹೊಣೆಗಾರರಾಗುತ್ತಾರೆ ಎಂಬುದನ್ನು ವಿಶ್ವವಿದ್ಯಾಲಯದ ಆಡಳಿತ ಮಂಡಳಿ ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

ವಿಶ್ವವಿದ್ಯಾಲಯದ ಕುಲಪತಿಗಳು ಅಕ್ಟೋಬರ್ 27ರಂದು ನಿವೃತ್ತರಾಗುವ ಸಂದರ್ಭದಲ್ಲಿ, ಅರ್ಹತೆ ಹೊಂದಿರುವ ಹಿರಿಯ ಅಧಿಕಾರಿಗಳನ್ನು ಪರಿಗಣಿಸದೆ ತಮ್ಮ ಆಪ್ತರಾಗಿರುವ ಗ್ರಂಥಾಲಯ ವ್ಯವಸ್ಥಾಪಕ ಮಚೇಂದ್ರನಾಥ್ ಅವರಿಗೆ ಪ್ರಭಾರ ಕುಲಪತಿ ಜವಾಬ್ದಾರಿ ನೀಡಲಾಗಿದೆ ಎಂದು ಆರೋಪಿಸಿದರು.

ಶ್ರೀನಿವಾಸ್ ಸೇರಿದಂತೆ ಅರ್ಹ ಅಧಿಕಾರಿಗಳನ್ನು ಕಡೆಗಣಿಸಿ ಈ ನಿರ್ಧಾರ ಕೈಗೊಳ್ಳಲಾಗಿದೆ. ನಿವೃತ್ತಿಯ ನಂತರವೂ ರಾಜಣ್ಣ, ಮಲ್ಲಿಕಾರ್ಜುನ ಹಾಗೂ ಹನುಮಂತಪ್ಪ ಅವರು ಸೇರಿಕೊಂಡು ರಾತ್ರೋರಾತ್ರಿ ನೇಮಕಾತಿ ಆದೇಶಗಳನ್ನು ಹೊರಡಿಸಿದ್ದಾರೆ. ಈ ಪ್ರಕ್ರಿಯೆಯಲ್ಲಿ ಹಣಕಾಸಿನ ಅವ್ಯವಹಾರ ನಡೆದಿರುವ ಶಂಕೆಯಿದ್ದು, ಹಣ ಪಡೆದು ಅಭ್ಯರ್ಥಿಗಳಿಗೆ 2ನೇ ಪುಟಕ್ಕೆ

ಮಹಾನಗರ ಪಾಲಿಕೆಗೆ ₹200 ಕೋಟಿ ಅನುದಾನ ಎಲ್ಲಿ? ನ. 1ರಂದು ಪ್ರತಿಭಟನೆಗೆ ಎಐಎಂಐಎಂ ಎಚ್ಚರಿಕೆ

ರಾಯಚೂರು: ರಾಯಚೂರು ನಗರಸಭೆಯನ್ನು ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸಿದ ಕಾಂಗ್ರೆಸ್ ಸರ್ಕಾರ ₹200 ಕೋಟಿ ಅನುದಾನ ಬಿಡುಗಡೆ ಮಾಡುವುದಾಗಿ ಘೋಷಿಸಿತ್ತು. ಆದರೆ ಇದುವರೆಗೂ ಎರಡು ರೂಪಾಯಿ ಅನುದಾನವನ್ನೂ ನೀಡಿಲ್ಲ ಎಂದು ಎಐಎಂಐಎಂ ಪಕ್ಷದ ರಾಯಚೂರು ನಗರ ಅಧ್ಯಕ್ಷ ಶಬೀರ್ ಅಹ್ಮದ್ ಹೌದಡಿ ಆರೋಪಿಸಿದರು.



ನಗರದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮಹಾನಗರ ಪಾಲಿಕೆಗೆ ಅಗತ್ಯ ಅನುದಾನ ಒದಗಿಸದಿರುವುದು, ಅಧಿಕಾರಿಗಳು ಹಾಗೂ ಸಿಬ್ಬಂದಿ ಕೊರತೆ ಮತ್ತು ಜಿಲ್ಲೆಯ ಪೊಲೀಸ್ ಇಲಾಖೆಯಲ್ಲಿನ ಖಾಲಿ ಹುದ್ದೆಗಳ ಭರ್ತಿಗೆ ಸರ್ಕಾರ ನಿರ್ಲಕ್ಷ್ಯ ವಹಿಸುತ್ತಿದೆ ಎಂದು ದೂರಿದರು.

ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಅಜಯ್ ಸಿಂಗ್ ಅವರು ನಗರಕ್ಕೆ ಭೇಟಿ ನೀಡಿದಾಗ ಮುಖ್ಯರಸ್ತೆಗಳಲ್ಲಿ ಸಂಚರಿಸಿ ಹಿಂದಿರುಗುತ್ತಾರೆ. ಆದರೆ ನಗರದ ಒಳಭಾಗಗಳಲ್ಲಿರುವ ಸಮಸ್ಯೆಗಳು ಹಾಗೂ ಸಾರ್ವಜನಿಕರು ಎದುರಿಸುತ್ತಿರುವ ಸಂಕಷ್ಟಗಳ ಬಗ್ಗೆ ಗಮನಹರಿಸುತ್ತಿಲ್ಲ ಎಂದು ಟೀಕಿಸಿದರು.

ನಗರದ ವಿವಿಧ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಜಿಲ್ಲಾ ಉಸ್ತುವಾರಿ ಸಚಿವರಿಗೆ ಈಗಾಗಲೇ 17 ವಿಷಯಗಳನ್ನು ಗಮನಕ್ಕೆ ತರಲಾಗಿದೆ. ಆದರೆ ಇದುವರೆಗೂ ಒಂದೇ ಒಂದು ಸಮಸ್ಯೆಗೂ ಸಮರ್ಪಕ ಉತ್ತರ ದೊರೆತಿಲ್ಲ. ಜನರ ಸಮಸ್ಯೆಗಳಿಗೆ ಸ್ಪಂದಿಸದಿದ್ದರೆ ಉಸ್ತುವಾರಿ ಸಚಿವರ ಭೇಟಿ ಕೇವಲ ಔಪಚಾರಿಕತೆಗೆ ಸೀಮಿತವಾಗುತ್ತದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಜಿಲ್ಲೆಯಲ್ಲಿ 24 ಪೊಲೀಸ್ ಉಪನಿರೀಕ್ಷಕರ ಹಾಗೂ 127 ಪೊಲೀಸ್ ಪೇದೆಗಳ ಹುದ್ದೆಗಳು ಖಾಲಿಯಿವೆ. ಸಿಬ್ಬಂದಿ ಕೊರತೆಯಿಂದ ಅಪರಾಧ ನಿಯಂತ್ರಣ, ರಾತ್ರಿ ಗಸ್ತು, ಪ್ರಕರಣಗಳ ತನಿಖೆ ಹಾಗೂ ಸಾರ್ವಜನಿಕರ ಸುರಕ್ಷತೆಗೆ ತೊಂದರೆಯಾಗುತ್ತಿದೆ. ಸರ್ಕಾರ ಕೂಡಲೇ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿ ಹೆಚ್ಚುವರಿ ಸಿಬ್ಬಂದಿಯನ್ನು ನೇಮಿಸಬೇಕು ಎಂದು ಆಗ್ರಹಿಸಿದರು.

ಮಹಾನಗರ ಪಾಲಿಕೆಯಲ್ಲಿ ಗ್ರೇಡ್ ಎ ವಿಭಾಗದಲ್ಲಿ 11, ಗ್ರೇಡ್ 2ನೇ ಪುಟಕ್ಕೆ

ವಿವಿಧ ನಿಗಮಗಳಿಂದ ಅರ್ಜಿ ಅಹ್ವಾನ

ರಾಯಚೂರು ಅಕ್ಟೋಬರ್ 30 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯ ಡಾ:ಬಿ.ಆರ್.ಅಂಬೇಡ್ಕರ್ ಅಬಿವೃದ್ದಿ ನಿಗಮ ಮತ್ತು ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮಗಳಿಂದ 2026-27ನೇ ಸಾಲಿನಲ್ಲಿ ಪರಿಶಿಷ್ಟ ಜಾತಿಗೆ ಸೇರಿದ ಸಮುದಾಯದವರ ಆರ್ಥಿಕ ಸಬಲೀಕರಣಕ್ಕಾಗಿ ವಿವಿಧ ಯೋಜನೆಗಳಲ್ಲಿ ಸೌಲಭ್ಯ ಪಡೆಯಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಯೋಜನೆಯ ವಿವರ: ನೇರಸಾಲ ಯೋಜನೆ, ಉದ್ಯಮ ಶೀಲತಾ ಅಭಿವೃದ್ದಿ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಮೈಕ್ರೊ ಕ್ರೆಡಿಟ್ ಯೋಜನೆ(ಮಹಿಳಾ ಸಂಘ), ಫಾಸ್ಟ್ ಫುಡ್ ಟ್ರಕ್ ಟ್ರೆಲ್/ ಮೊಬೈಲ್ ಕಿಚನ್ ಫುಡ್ (ಸಫಾಯಿ ಕರ್ಮಚಾರಿ ಅಭಿವೃದ್ದಿ ನಿಗಮವನ್ನು ಹೊರತು ಪಡಿಸಿ), ಭೂ ಒಡೆತನ ಯೋಜನೆ, ಕುರಿ ಮತ್ತು ಮೇಕೆ ಸಾಕಾಣಿಕೆ ಯೋಜನೆ, ಹೈನುಗಾರಿಕೆ ಯೋಜನೆ (ಸಫಾಯಿ ಕರ್ಮಚಾರಿ ಅಭಿವೃದ್ದಿ ನಿಗಮವನ್ನು ಹೊರತು ಪಡಿಸಿ), ಗಂಗಾ ಕಲ್ಯಾಣ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದು.

ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ https://sevasindhu.karnataka.gov.in ಮೂಲಕ ಅಥವಾ ಗ್ರಾಮ ಒನ್ / ಕರ್ನಾಟಕ ಒನ್ ಬೆಂಗಳೂರು ಒನ್ ನಲ್ಲಿ ನವೆಂಬರ್ 30ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. (2023-24, 2024-25, 2025-26 ನೇ ಸಾಲಿನಲ್ಲಿ ಆನ್ ಲೈನ್ ಮುಖಾಂತರ ಅರ್ಜಿ ಸಲ್ಲಿಸಿರುವವರು ಮೊತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.) ನಿಗಮದ ನಿರ್ದೇಶಕ ಮಂಡಳಿ, ವಿವೇಚನಾ ಕೋಟಾ ಅಥವಾ ಸರ್ಕಾರದ ಸಾಂಸ್ಥಿಕ ಕೋಟಾದಡಿ ಸ್ವೀಕರಿಸುವ ಅರ್ಜಿಗಳನ್ನು ಸಹಾ ಸೇವಾಸಿಂಧು ಪೋರ್ಟಲ್ ಮೂಲಕವೇ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಚೇರಿ ಅಥವಾ ನಿಗಮದ ವೆಬ್‌ಸೈಟ್ ಅನ್ನು ಸಂಪರ್ಕಿಸುವತೆ ರಾಯಚೂರು ಜಿಲ್ಲೆಯ ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ದಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿವಿಧ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ರಾಯಚೂರು ಅಕ್ಟೋಬರ್ 30 (ಕರ್ನಾಟಕ ವಾರ್ತೆ): ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಿಂದ 2026-27ನೇ ಸಾಲಿನಲ್ಲಿ ವಿವಿಧ ಸೌಲಭ್ಯಕ್ಕೆ ಅರ್ಹ ವಿಕಲಚೇತನ ಫಲಾನುಭವಿಗಳಿಂದ ಸೇವಾಸಿಂಧು ತಂತ್ರಾಶದ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಫಲಾನುಭವಿ ಆಧಾರಿತ ಯೋಜನೆಗಳಾದ ಆಧಾರ್ ಯೋಜನೆ, ಸಾಧನೆ ಯೋಜನೆ, ವೈದ್ಯಕೀಯ ಪರಿಹಾರ ನಿಧಿ ಯೋಜನೆ, ಪ್ರತಿಭಾವಂತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಯೋಜನೆ, ನಿರುದ್ಯೋಗ ಭತ್ಯೆ ಯೋಜನೆ, ಶಿಶುಪಾಲನೆ ಭತ್ಯ ಯೋಜನೆ, ಮರಣ ಪರಿಹಾರ ನಿಧಿ ಯೋಜನೆ, ಪ್ರತಿಭೆ ಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್ ಟಾಪ್ ಯೋಜನೆ, ದೃಷ್ಟಿದೋಷ ಹೊಂದಿದ ವಿಕಲಚೇತನರಿಗೆ ಬ್ರೆಲ್ ಕಿಟ್ ಯೋಜನೆ, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರವಾಹನ ಯೋಜನೆ, ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ, ಸಾಧನೆ-ಸಲಕರಣೆ ಯೋಜನೆ, ವಿಕಲಚೇತನರಿಗೆ ಬ್ಯಾಟರಿ ಚಾಲಿತ ವ್ಹೀಲ್‌ಚೇರ್ ಯೋಜನೆಗಳಿಗೆ ಜಿಲ್ಲಾ ವ್ಯಾಪ್ತಿಯ ಅರ್ಹ ವಿಕಲಚೇತನ ಫಲಾನುಭವಿಗಳು ಆನ್‌ಲೈನ್ ಸೇವಾ-ಸಿಂಧು ತಂತ್ರಾಶದ (ಪೋರ್ಟಲ್) ಮೂಲಕ ಗ್ರಾಮ-ಓನ್, ಕರ್ನಾಟಕ-ಓನ್, ಬೆಂಗಳೂರು-ಓನ್ ವೆಬ್‌ಸೈಟ್ ವಿಳಾಸ: https://sevaone.karnataka.gov.in/ ಮುಖಾಂತರ ದಿನಾಂಕ:-22-09-2026 ರಿಂದ ಕೊನೆಯ ದಿನಾಂಕ:-30-10-2026 ನಿಗಧಿಸಿಪಡಿಸಲಾಗಿರುತ್ತದೆ. ಮುಂದುವರೆದು ಸದರಿ ಯೋಜನೆಗಳಿಗೆ ದಿನಾಂಕ 15-11-2026 ರವರೆಗೆ ವಿಸ್ತರಣೆ ಮಾಡಲಾಗಿರುತ್ತದೆ. ಪ್ರಯುಕ್ತ ಈ ದಿನಾಂಕದೊಳಗಾಗಿ ಅರ್ಜಿಗಳನ್ನು ದಾಖಲಾತಿಗಳೊಂದಿಗೆ ಸಲ್ಲಿಸಲು ತಿಳಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಕಟ್ಟಡ ಮ.ನಂ:-1-3-1411/4 ಆಶಾಪೂರು ರಸ್ತೆ, ಅಫೀರ್ ಕಾಲೋನಿ ಎದುರುಗಡೆ ಶ್ರೀ ರಾಜಾಮಾತಾ ದೇವಸ್ಥಾನ ಹತ್ತಿರ, ರಾಯಚೂರು ಅಥವಾ ರಾಯಚೂರು ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ:-08532-200992ಗೆ ಕಚೇರಿ ಕೆಲಸದ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಅಥವಾ ಇಲಾಖೆಯ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರನ್ನು, ನಗರ ಪ್ರದೇಶದಲ್ಲಿ ನಗರ ಪುನರ್ವಸತಿ ಕಾರ್ಯಕರ್ತರನ್ನು ಹಾಗೂ ತಾಲ್ಲೂಕು ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರಿಂದ ಮಾರ್ಗದರ್ಶನ ಪಡೆದು ಇಲಾಖೆಯ ಯೋಜನೆಗಳಿಗೆ ಸಂಬಧಿಸಿದತೆ ಆನ್‌ಲೈನ್ ತಂತ್ರಾಶದಲ್ಲಿ ಸಲ್ಲಿಸಿದ ಅರ್ಜಿಯನ್ನು ಸಂಬಧಪಟ್ಟ ದಾಖಲೆಗಳೊಂದಿಗೆ ಹಾರ್ಡ್ ಪ್ರತಿಯೊಂದಿಗೆ ಅರ್ಜಿಗಳನ್ನು ಈ ಇಲಾಖೆಗೆ ಅಥವಾ ಆಯಾ ತಾಲ್ಲೂಕಿನ ಸಂಬಧಪಟ್ಟ ಪುನರ್ವಸತಿ ಕಾರ್ಯಕರ್ತರಿಗೆ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಮೃತ ವಾಣಿ

ಸತ್ಯದ ದಾರಿಯಲ್ಲಿ ಏರುಪೇರು ಇದೆ, ಆದರೆ ಅದು ಎಂದಿಗೂ ಮುಳುಗುವುದಿಲ್ಲ.



ಬೆಟಗೇರಿ ಪ್ರಾ.ಆ.ಕೇಂದ್ರದಲ್ಲಿ ವಿಶ್ವ ಪಾರ್ಶ್ವವಾಯು ದಿನಾಚರಣೆ



ಕೊಪ್ಪಳ, ಅಕ್ಟೋಬರ್ 30, (ಕರ್ನಾಟಕ ವಾರ್ತೆ): ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿ, ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿಗಳ ಕಾರ್ಯಾಲಯ ಹಾಗೂ ಜಿಲ್ಲಾ ಬೋಧಕ ಆಸ್ಪತ್ರೆ ಇವರ ಸಂಯುಕ್ತ ಆಶ್ರಯದಲ್ಲಿ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ (ಕಭೀ) ಕಾರ್ಯಕ್ರಮದ ಅಂಗವಾಗಿ ಗುರುವಾರದಂದು ಪ್ರಾಥಮಿಕ ಆರೋಗ್ಯ ಕೇಂದ್ರ ಬೆಟಗೇರಿಯಲ್ಲಿ ''ವಿಶ್ವ ಪಾರ್ಶ್ವವಾಯು ದಿನಾಚರಣೆ'' ಯನ್ನು ''ಪ್ರತಿ ನಿಮಿಷವೂ ಮುಖ್ಯ-ಪಾರ್ಶ್ವವಾಯುವನ್ನು ಗುರುತಿಸಿ, ತಕ್ಷಣ ಕ್ರಮ ಕೈಗೊಳ್ಳಿ, ಜೀವಗಳನ್ನು ಉಳಿಸಿ'' ಎಂಬ ಘೋಷವಾಕ್ಯದೊಂದಿಗೆ ಪಾರ್ಶ್ವವಾಯು ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಹಮ್ಮಿಕೊಳ್ಳಲಾಗಿತ್ತು.

ಬೇಟಗೇರಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳಾದ ಡಾ. ಇರ್ಫಾನಾ ಅಂಜುಮ್ ಅವರು ಮಾತನಾಡಿ, ಪಾರ್ಶ್ವವಾಯು ಒಂದು ನರವೈಜ್ಞಾನಿಕ ಕಾಯಿಲೆಯಾಗಿದೆ, ಇದಕ್ಕೆ ಪ್ರಾರಂಭದಲ್ಲಿ ಲಕ್ಷಣಗಳನ್ನು ಗುರುತಿಸಿ ಕಂಡುಹಿಡಿಯಬೇಕು. ಪಾರ್ಶ್ವವಾಯುವಿನ ಕಾರಣಗಳು, ಚಿಹ್ನೆಗಳು ಮತ್ತು ಲಕ್ಷಣಗಳು, ಆರಂಭಿಕ ಗುರುತಿಸುವಿಕೆಯ ಪ್ರಾಮುಖ್ಯತೆ ಮತ್ತು ಕಭೀ ಕಾರ್ಯಕ್ರಮದ ಅಡಿಯಲ್ಲಿ ಪಾರ್ಶ್ವವಾಯು ರೋಗಿಗಳಿಗೆ ಫಿಜಿಯೋಥೆರಪಿ ಚಿಕ್ಸಿತೆಯನ್ನು ನೀಡಲಾಗುತ್ತದೆ, ಅಂತಹ ರೋಗಿಗಳಿಗೆ ಜಿಲ್ಲಾ ಆಸ್ಪತ್ರೆಗೆ ಕಳುಹಿಸಲು ಆಶಾ ಕಾರ್ಯಕರ್ತೆಯರಿಗೆ ತಿಳಿಸಿದರು.


ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ದೇವಮ್ಮ ಅವರು ಮಾತನಾಡಿ, ವಿವಿಧ ಆರೋಗ್ಯ ಇಲಾಖೆಯ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಿದರು. ನರವೈಜ್ಞಾನಿಕ ಕಾಯಿಲೆಗಳ ಆರಂಭಿಕ ಲಕ್ಷಣಗಳನ್ನು ಗುರುತಿಸುವುದು ಹಾಗೂ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳುವುದರಿಂದ ಮೆದುಳಿಗೆ ಸಂಬಧಿಸಿದ ಕಾಯಿಲೆಗಳ ಅಪಾಯವನ್ನು ಹೇಗೆ ಕಡಿಮೆ ಮಾಡಬಹುದು ಎಂಬುದರ ಕುರಿತು ವಿವರವಾಗಿ ತಿಳಿಸಿದರು.

ಕಭೀ ಕಾರ್ಯಕ್ರಮದ ಭೌತಚಿಕಿತ್ಸಕರಾದ ಚೈತ್ರಾ ಸರೋದೆ, ಪಾರ್ಶ್ವವಾಯುವನ್ನು ಆರಂಭಿಕ ಹಂತದಲ್ಲಿಯೇ ಗುರುತಿಸಲು ಬಳಸುವ ವಿಧಾನ, ರೋಗಲಕ್ಷಣಗಳು ಕಾಣಿಸಿಕೊಂಡ ತಕ್ಷಣವೇ ತುರ್ತು ಚಿಕಿತ್ಸೆಗೆ ರೋಗಿಯನ್ನು ರವಾನಿಸುವ ಅಗತ್ಯತೆ ಹಾಗೂ ಪಾರ್ಶ್ವವಾಯುವಿನ ನಂತರದ ಪುನರ್ವಸತಿಯಲ್ಲಿ ಭೌತಚಿಕಿತ್ಸೆಯ ಪಾತ್ರದ ಕುರಿತು ವಿವರಿಸಿದರು. ಕಭೀ ಕಾರ್ಯಕ್ರಮದಲ್ಲಿ ನರವೈಜ್ಞಾನಿಕ ಕಾಯಿಲೆಗಳಾದ ತಲೆನೋವು, ಪಾರ್ಶ್ವವಾಯು, ಅಪಸ್ಮಾರ ಹಾಗೂ ಡಿಮಾನ್ಷಿಯ ಅಂತಹ ಕಾಯಿಲೆಗಳಿಗೆ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ನೀಡಲಾಗುತ್ತದೆ. ಹಾಗೂ ನರವೈಜ್ಞಾನಿಕ ಕಾಯಿಲೆ ಇರುವಂತಹ ವ್ಯಕ್ತಿಗೆ ಬೆಂಗಳೂರಿನ ನಿಮ್ಹಾನ್ಸ್ ಇಂದ ಟೆಲಿ ನ್ಯೂರೋಲಾಜಿ ಎಂಬ ಸೇವೆಯನ್ನು ನೀಡಲಾಗುತ್ತದೆ ಅದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ತಿಳಿಸಿದರು ಹಾಗೂ ಫಿಸಿಯೋಥೆರಪಿ ಸೇವೆಯು ರೋಗಿಗಳ ಪುನರ್ವಸತಿಯಲ್ಲಿ ಅವುಗಳ ಮಹತ್ವವನ್ನು ವಿವರಿಸಿದರು.

ಕರ್ನಾಟಕ ಮೆದುಳಿನ ಆರೋಗ್ಯ ಉಪಕ್ರಮದ ಜಿಲ್ಲಾ ಸಂಯೋಜಕರಾದ ತೇಜಸ್ವಿನಿ, ಕಾರ್ಯಕ್ರಮದಲ್ಲಿ ತಲೆನೋವು, ಅಪಸ್ಮಾರ, ಮರೆವಿನ ಕಾಯಿಲೆ ಹಾಗೂ ಪಾರ್ಶ್ವವಾಯು ಎಂಬ ನಾಲ್ಕು ಪ್ರಮುಖ ನರವೈಜ್ಞಾನಿಕ ಕಾಯಿಲೆಗಳ ಬಗ್ಗೆ ಮಾಹಿತಿ ಹಾಗೂ ಉದ್ದೇಶಗಳು, ಕಾರ್ಯಚಟುವಟಿಕೆಗಳು ಹಾಗೂ ಲಭ್ಯವಿರುವ ಸೇವೆಗಳ ಕುರಿತು ಪರಿಚಯಿಸಿದರು.

ಕಾರ್ಯಕ್ರಮದಲ್ಲಿ ಸಮುದಾಯ ಆರೋಗ್ಯ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು, ಶುಶ್ರೂಷಾಧಿಕಾರಿಗಳು, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳು, ಆಸ್ಪತ್ರೆಯ ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ರಾಜ್ಯೋತ್ಸವ ಪ್ರಶಸ್ತಿಗೆ ಆಯ್ಕೆಯಾದ ಹಿರಿಯ ಸಾಹಿತಿ ವೀರಹನುಮಾನ ಅವರಿಗೆ ಕನ್ನಡ ಸಾಹಿತ್ಯ ಪರಿಷತ್ ಅಭಿನಂದನೆ



ರಾಯಚೂರು, ಅ.30: ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ತಮ್ಮದೇ ಆದ ವಿಶಿಷ್ಟ ಕೊಡುಗೆ ನೀಡಿರುವ ರಾಯಚೂರು ಜಿಲ್ಲೆಯ ಹಿರಿಯ ಸಾಹಿತಿ ವೀರಹನುಮಾನ ಅವರು 2026ನೇ ಸಾಲಿನ ಪ್ರತಿಷ್ಠಿತ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಗೆ ಆಯ್ಕೆಯಾಗಿರುವುದಕ್ಕೆ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಹಾಗೂ ತಾಲೂಕು ಘಟಕಗಳ ಪದಾಧಿಕಾರಿಗಳು ಹರ್ಷ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದ್ದಾರೆ.

ಕನ್ನಡನಾಡು, ನುಡಿ, ಸಾಹಿತ್ಯ ಹಾಗೂ ಸಾಂಸ್ಕೃತಿಕ ಕ್ಷೇತ್ರದಲ್ಲಿ ನಿರಂತರವಾಗಿ ಸೇವೆ ಸಲ್ಲಿಸುತ್ತಿರುವ ವೀರಹನುಮಾನ ಅವರ ಸಾಧನೆಯನ್ನು ಗುರುತಿಸಿ ರಾಜ್ಯ ಸರ್ಕಾರ ರಾಜ್ಯೋತ್ಸವ ಪ್ರಶಸ್ತಿಗೆ ಆಯ್ಕೆ ಮಾಡಿರುವುದು ಜಿಲ್ಲೆಯ ಸಾಹಿತ್ಯ ವಲಯಕ್ಕೆ ಹೆಮ್ಮೆಯ ಸಂಗತಿಯಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ರಂಗಣ್ಣ ಪಾಟೀಲ್ ಅಳ್ಳುಂಡಿ ತಿಳಿಸಿದ್ದಾರೆ.

ಹಿರಿಯ ಸಾಹಿತಿ ವೀರಹನುಮಾನ ಅವರು ಕನ್ನಡ ಭಾಷೆ ಮತ್ತು ಸಾಹಿತ್ಯದ ಬೆಳವಣಿಗೆಗೆ ತಮ್ಮದೇ ಆದ ಕೊಡುಗೆ ನೀಡಿದ್ದು, ನಾಡಿನ ಸಾಂಸ್ಕೃತಿಕ ಪರಂಪರೆ ಹಾಗೂ ಸಾಹಿತ್ಯಿಕ ಮೌಲ್ಯಗಳ ಉಳಿವು ಮತ್ತು ಪ್ರಚಾರಕ್ಕೆ ಶ್ರಮಿಸುತ್ತಿದ್ದಾರೆ. ಅವರ ಸಾಹಿತ್ಯ ಸೇವೆಗೆ ರಾಜ್ಯಮಟ್ಟದ ಗೌರವ ದೊರೆತಿರುವುದು ಜಿಲ್ಲೆಯ ಇತರ ಸಾಹಿತಿಗಳು ಹಾಗೂ ಯುವ ಬರಹಗಾರರಿಗೆ ಪ್ರೇರಣೆಯಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಸಾಹಿತ್ಯ ಕ್ಷೇತ್ರದಲ್ಲಿ ದೀರ್ಘಕಾಲದಿಂದ ತೊಡಗಿಸಿಕೊಂಡಿರುವ ವೀರಹನುಮಾನ ಅವರ ಸಾಧನೆಯನ್ನು ರಾಜ್ಯ ಸರ್ಕಾರ ಗುರುತಿಸಿರುವುದು ಅಭಿನಂದನೀಯ. ಈ ಗೌರವವು ಅವರ ವೈಯಕ್ತಿಕ ಸಾಧನೆಗೆ ಮಾತ್ರವಲ್ಲದೆ ರಾಯಚೂರು ಜಿಲ್ಲೆಯ ಸಾಹಿತ್ಯ ಪರಂಪರೆಗೆ ದೊರೆತ ಮನ್ನಣೆಯಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು ಸಂತಸ ವ್ಯಕ್ತಪಡಿಸಿದ್ದಾರೆ.

ವೀರಹನುಮಾನ ಅವರಿಗೆ ಮುಂದಿನ ದಿನಗಳಲ್ಲಿ ಮತ್ತಷ್ಟು ಪ್ರಶಸ್ತಿ, ಪುರಸ್ಕಾರಗಳು ಲಭಿಸಲಿ. ಉತ್ತಮ ಆರೋಗ್ಯ, ದೀರ್ಘಾಯುಷ್ಯ ದೊರೆತು ಅವರ ಸಾಹಿತ್ಯ ಸೇವೆ ನಿರಂತರವಾಗಿ ಮುಂದುವರಿಯಲಿ ಎಂದು ಹಾರೈಸಿದ್ದಾರೆ.

ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ರಂಗಣ್ಣ ಪಾಟೀಲ್ ಅಳ್ಳುಂಡಿ, ತಾಲೂಕು ಅಧ್ಯಕ್ಷ ಡಾ. ಬಿ. ವಿಜಯರಾಜೇಂದ್ರ, ಜಿಲ್ಲಾ ಹಾಗೂ ತಾಲೂಕು ಘಟಕಗಳ ಗೌರವ ಕಾರ್ಯದರ್ಶಿಗಳು ಮತ್ತು ಸರ್ವ ಪದಾಧಿಕಾರಿಗಳು ಹಿರಿಯ ಸಾಹಿತಿ ವೀರಹನುಮಾನ ಅವರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

ಜಿಲ್ಲಾ ಮಟ್ಟದ ಯುವಜನೋತ್ಸವ ಯಶಸ್ವಿ

ರಾಯಚೂರು ಅಕ್ಟೋಬರ್ 30 (ಕರ್ನಾಟಕ ವಾರ್ತೆ): ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಯಚೂರು ಹಾಗೂ ವೇದಾಂತ ಪದವಿ ಕಾಲೇಜು, ರಾಯಚೂರುರವರ ಸಂಯುಕ್ತಾಶ್ರಯದಲ್ಲಿ 2026-27ನೇ ಸಾಲಿನ ರಾಯಚೂರು ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮ ಸ್ಪರ್ಧೆಗಳನ್ನು ದಿನಾಂಕ:28-10-2026 ರಂದು ನಗರದ ವೇದಾಂತ ಪದವಿ ಕಾಲೇಜಿನಲ್ಲಿ ಯಶಸ್ವಿಯಾಗಿ ಸಂಘಟನೆ ಮಾಡಲಾಗಿರುತ್ತದೆ.

ಸದರಿ ಯುವಜನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ವಿಜೇತರಾದ ಸ್ಪರ್ಧಾಳುಗಳಿಗೆ ಜನಪದ ನೃತ್ಯದಲ್ಲಿ ಸಿಂಧನೂರು ವಿನೋದ್ ಅವರ ತಂಡ ಪ್ರಥಮ ಸ್ಥಾನ, ಟಾಗೋರ ಕಾಲೇಜಿನ .. ತಂಡ ದ್ವಿತೀಯ ಸ್ಥಾನ ಪಡೆದಿದೆ. ಜನಪದ ಗೀತೆಯಲ್ಲಿ ದೇವಸುಗೂರಿನ ಸೂಗೂರೇಶ್ವರ ಯುವಕ ಮಂಡಳಿ ಪ್ರಥಮ ಸ್ಥಾನ, ಕೃಷಿ ವಿಶ್ವ ವಿದ್ಯಾಲಯದ ಕಲಾಶ್ರೀ ದ್ವಿತೀಯ ಸ್ಥಾನ ಪಡೆದರು. ಚಿತ್ರಕಲೆ (ವೈಯಕ್ತಿಕ)ಯಲ್ಲಿ ಕೃಷಿ ವಿಶ್ವ ವಿದ್ಯಾಲಯದ ಆನಂದ್ ಸದಾಶಿವ ಪ್ರಥಮ ಸ್ಥಾನ, ಮಹಿಳಾ ಸ.ಪ್ರ.ದ ಕಾಲೇಜಿನ ಸುಮಯ್ಯ ದ್ವಿತೀಯ ಸ್ಥಾನ ಹಾಗೂ ಸೇವಾ ಕಾಲೇಜಿನ ಮಂಜುಳಾ ತೃತೀಯ ಸ್ಥಾನ ಪಡೆದರು. ಕವಿತೆ ಬರೆಯುವುದು (ವೈಯಕ್ತಿಕ): ದೀಪಾ ಎ.ಶಿಂಧೆ ಪ್ರಥಮ ಸ್ಥಾನ ಪಡೆದರು. ಪ್ರಿಯಾಂಕ ಕರಿಯಪ್ಪ ಕುದರಿ ದ್ವಿತೀಯ ಸ್ಥಾನ ಹಾಗೂ ಉಮೇಶ್ ಎಮ್ ಜಗಲ್ ತೃತೀಯ ಸ್ಥಾನ ಪಡೆದರು. ನುಕ್ಕಾಡ್ ನಾಟಕದಲ್ಲಿ ಎಸ್.ಎಸ್.ಎಮ್. ಪದವಿ ಕಾಲೇಜು ಪ್ರಥಮ ಹಾಗೂ ವೇದಾಂತ ಪದವಿ ಕಾಲೇಜು ದ್ವಿತೀಯ ಸ್ಥಾನ ಪಡೆದಿದ್ದು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಈರೇಶ ನಾಯಕ ಅವರು ಅಭಿನಂಧನೆಗಳನ್ನು ಸಲ್ಲಿಸಿದ್ದಾರೆ.

ಮೊದಲನೇ ಪುಟದಿಂದ

ಹೆಲಿಕಾಪ್ಟರ್ ದುರಂತ: ಕರ್ನಾಟಕದ ಐವರು ಸೇರಿ ಆರು ಮಂದಿ ಸಾವು

ಪತ್ನಿ ಹಾಗೂ ಮಗುವಿನೊಂದಿಗೆ ತುಮಕೂರಿನ ಸಪ್ತಗಿರಿ ಬಡಾವಣೆಯಲ್ಲಿ ವಾಸವಾಗಿದ್ದರು ಎಂದು ತಿಳಿದುಬಂದಿದೆ.

ಹಾಸನ ಜಿಲ್ಲೆಯ ಬಾಚಿಹಳ್ಳಿ ಗ್ರಾಮದ ಪ್ರತಾಪ್ ಗೌಡ ಅವರು ಬೆಂಗಳೂರಿನಲ್ಲಿ ಉದ್ಯಮಿಯಾಗಿ ಗುರುತಿಸಿಕೊಂಡಿದ್ದರು. ಸಮಾಜಸೇವೆಯಲ್ಲಿಯೂ ತೊಡಗಿಸಿಕೊಂಡಿದ್ದ ಅವರು, ಯಸಳೂರು ಜಿಲ್ಲಾ ಪಂಚಾಯಿತಿ ಕ್ಷೇತ್ರದಿಂದ ಜೆಡಿಎಸ್ ಟಿಕೆಟ್ ಆಕಾಂಕ್ಷಿಯಾಗಿದ್ದರು ಎನ್ನಲಾಗಿದೆ.

ತುಮಕೂರು ಜಿಲ್ಲೆಯ ಹುಲಿಯೂರುದುರ್ಗದ ಎಚ್.ಎನ್. ನಟರಾಜು ಅವರು ವಿದ್ಯಾಭಾರತಿ ಶಿಕ್ಷಣ ಸಂಸ್ಥೆಯ ಮುಖ್ಯಸ್ಥರಾಗಿದ್ದರು. ಸ್ನೇಹಿತರೊಂದಿಗೆ ನಾಲ್ಕು ದಿನಗಳ ಹಿಂದೆ ಉತ್ತರಾಖಂಡ ಪ್ರವಾಸಕ್ಕೆ ತೆರಳಿದ್ದ ಅವರು ಹೆಲಿಕಾಪ್ಟರ್ ದುರಂತದಲ್ಲಿ ಮೃತಪಟ್ಟಿದ್ದಾರೆ.

ಟ್ರಾನ್ಸ್ ಭಾರತ್ ಏವಿಯೇಷನ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆ ನಿರ್ವಹಿಸುತ್ತಿದ್ದ - ನೋಂದಣಿ ಸಂಖ್ಯೆಯ ಹೆಲಿಕಾಪ್ಟರ್ ಶುಕ್ರವಾರ ಮಧ್ಯಾಹ್ನ 1.14ರ ಸುಮಾರಿಗೆ ಬದರಿನಾಥದಿಂದ ಡೆಹ್ರಾಡೂನ್‌ನ ಸಹಸ್ರಧಾರಾ ಹೆಲಿಪ್ಯಾಡ್‌ಗೆ ಪ್ರಯಾಣ ಆರಂಭಿಸಿತ್ತು. ಜೋಶಿಮಠ ಕಣಿವೆಯ ಮೇಲೆ ಹಾರಾಟ ನಡೆಸುತ್ತಿದ್ದ ಸಂದರ್ಭದಲ್ಲಿ ಹೆಲಿಕಾಪ್ಟರ್‌ನ ಸಂಪರ್ಕ ಕಡಿತಗೊಂಡಿದೆ ಎಂದು ಉತ್ತರಾಖಂಡ ನಾಗರಿಕ ವಿಮಾನಯಾನ ಅಭಿವೃದ್ಧಿ ಪ್ರಾಧಿಕಾರ ತಿಳಿಸಿದೆ.

ಹೆಲಿಕಾಪ್ಟರ್ ಸಂಪರ್ಕ ಕಳೆದುಕೊಂಡ ಬೆನ್ನಲ್ಲೇ ಸೇನೆ, ಸ್ಥಳೀಯ ಆಡಳಿತ ಹಾಗೂ ರಾಜ್ಯ ವಿಪತ್ತು ನಿರ್ವಹಣಾ ಪಡೆ ಸಿಬ್ಬಂದಿ ಶೋಧ ಮತ್ತು ರಕ್ಷಣಾ ಕಾರ್ಯಾಚರಣೆ ಆರಂಭಿಸಿದ್ದರು. ಪರ್ವತ ಪ್ರದೇಶದಲ್ಲಿ ಅವಶೇಷಗಳು ಪತ್ತೆಯಾಗಿದ್ದು, ಮೃತದೇಹಗಳನ್ನು ಸ್ಥಳಾಂತರಿಸುವ ಕಾರ್ಯಾಚರಣೆ ಕೈಗೊಳ್ಳಲಾಗಿದೆ.

ಅಪಘಾತದ ನಿಖರ ಕಾರಣ ತಿಳಿದುಬಂದಿಲ್ಲ. ಹೆಲಿಕಾಪ್ಟರ್ ಪತನದ ಕುರಿತು ವಿಮಾನ ಅಪಘಾತ ತನಿಖಾ ಬ್ಯೂರೋ (ಎಎಐಬಿ) ತನಿಖೆ ನಡೆಸಲಿದೆ ಎಂದು ವರದಿಯಾಗಿದೆ.

ಕರ್ನಾಟಕದ ಐವರು ಒಂದೇ ಹೆಲಿಕಾಪ್ಟರ್ ದುರಂತದಲ್ಲಿ ಮೃತಪಟ್ಟಿರುವ ಸುದ್ದಿ ರಾಜ್ಯದಲ್ಲಿ ಆಘಾತ ಮೂಡಿಸಿದ್ದು, ವಿವಿಧ ಗಣ್ಯರು ಮೃತರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ.

ಅಂಭಾ ಭವಾನಿ ಶ್ರೀಮಠದ ಅಭಿವೃದ್ಧಿಗೆ ₹1 ಕೋಟಿ ನೀಡುವುದಾಗಿ ಬಸನಗೌಡ ದದ್ದಲ್ ಘೋಷಣೆ

ಸಮೃದ್ಧವಾಗಿ ಬೆಳೆಯಲಿ. ರೈತರ ಬದುಕಿನಲ್ಲಿ ನೆಮ್ಮದಿ ನೆಲೆಸಲಿ ಎಂದು ಪ್ರಾರ್ಥಿಸಿದರು.

ಅಂಭಾ ಭವಾನಿ ಶ್ರೀಮಠದ ಅಭಿವೃದ್ಧಿ ಹಾಗೂ ಭಕ್ತರಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವ ಕಾರ್ಯಗಳಿಗೆ ತಮ್ಮ ಭಕ್ತಿಸೇವೆಯಾಗಿ ₹1 ಕೋಟಿ ನೀಡುವುದಾಗಿ ಶಾಸಕ ಬಸನಗೌಡ ದದ್ದಲ್ ಅವರು ಶ್ರೀಶೈಲ ಜಗದ್ಗುರುಗಳ ಸಮ್ಮುಖದಲ್ಲಿ ನಡೆದ ಬಹಿರಂಗ ಧರ್ಮಸಭೆಯಲ್ಲಿ ಘೋಷಿಸಿದರು.

ಶಿಲಾಮೂರ್ತಿಗಳ ಪ್ರತಿಷ್ಠಾಪನೆ ಹಾಗೂ ಶಿಲಾಮಂಟಪದ ಲೋಕಾರ್ಪಣೆ ಕಾರ್ಯಕ್ರಮವು ಧಾರ್ಮಿಕ ವಿಧಿವಿಧಾನಗಳೊಂದಿಗೆ ನೆರವೇರಿತು. ಶ್ರೀಶೈಲ ಜಗದ್ಗುರುಗಳ ದಿವ್ಯ ಸಾನ್ನಿಧ್ಯದಲ್ಲಿ ನಡೆದ ಧರ್ಮಸಭೆಯಲ್ಲಿ ವಿವಿಧ ಮಠಾಧೀಶರು, ಜನಪ್ರತಿನಿಧಿಗಳು ಹಾಗೂ ಭಕ್ತರು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಜಿಲ್ಲೆಯ ವಿವಿಧ ಶ್ರೀಮಠಗಳ ಪೀಠಾಧಿಪತಿಗಳು, ರಾಯಚೂರು ಜಿಲ್ಲೆಯ ಹಾಗೂ ಸಿಂಧನೂರು ತಾಲೂಕಿನ ಜನಪ್ರತಿನಿಧಿಗಳು, ರಾಜಕೀಯ ಮತ್ತು ಸಾಮಾಜಿಕ ಮುಖಂಡರು, ಗಣ್ಯರು, ಸಾಧುಸಂತರು ಹಾಗೂ ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸಿದ್ದ ಅಪಾರ ಸಂಖ್ಯೆಯ ಭಕ್ತರು ಉಪಸ್ಥಿತರಿದ್ದರು.

ನರಸಿಂಹ ಶೆಟ್ಟಿ ಹತ್ಯೆ ಖಂಡಿಸಿ ಆರ್ಯವೈಶ್ಯ ಮಹಾಸಭಾದಿಂದ ಎಸ್ಪಿಗೆ ಮನವಿ: ₹50 ಲಕ್ಷ ಪರಿಹಾರಕ್ಕೆ ಆಗ್ರಹ

ವಿಚಾರಣೆಯಲ್ಲಿ ವಿಶೇಷ ಅನುಭವ ಹೊಂದಿರುವ ತಜ್ಞ ವಕೀಲರನ್ನು ವಿಶೇಷ ಸರ್ಕಾರಿ ಅಭಿಯೋಜಕರನ್ನಾಗಿ ನೇಮಿಸಬೇಕು. ಇದರಿಂದ ಪ್ರಕರಣದ ವಿಚಾರಣೆ ಪರಿಣಾಮಕಾರಿಯಾಗಿ ನಡೆದು ಸಂತ್ರಸ್ತ ಕುಟುಂಬಕ್ಕೆ ನ್ಯಾಯ ದೊರಕಲು ಅನುಕೂಲವಾಗಲಿದೆ ಎಂದು ಮಹಾಸಭಾದ ಮುಖಂಡರು ಮನವಿಯಲ್ಲಿ ತಿಳಿಸಿದ್ದಾರೆ.

ಇದಕ್ಕೂ ಮೊದಲು ನಗರದ ರಾಯಚೂರು ಹಬ್‌ನಲ್ಲಿ ಕರ್ನಾಟಕ ಆರ್ಯವೈಶ್ಯ ಮಹಾಸಭಾ ಹಾಗೂ ಜಿಲ್ಲಾ ಸಮಿತಿ ವತಿಯಿಂದ ಪೂರ್ವಭಾವಿ ಸಭೆ ನಡೆಸಲಾಯಿತು. ಸಭೆಯಲ್ಲಿ ನರಸಿಂಹ ಶೆಟ್ಟಿ ಅವರ ಹತ್ಯೆಗೆ ತೀವ್ರ ಖಂಡನೆ ವ್ಯಕ್ತಪಡಿಸಿದ ಮುಖಂಡರು, ಮೃತರ ಆತ್ಮಕ್ಕೆ ಶಾಂತಿ ಕೋರಿ ಒಂದು ನಿಮಿಷ ಮೌನಾಚರಣೆ ನಡೆಸಿ ಶ್ರದ್ಧಾಂಜಲಿ ಸಲ್ಲಿಸಿದರು.

ಬಳಿಕ ಮಹಾಸಭಾದ ಹಿರಿಯ ಉಪಾಧ್ಯಕ್ಷ ಕುಂಟ್ನಾಳ್ ವೆಂಕಟೇಶ ಅವರ ನೇತೃತ್ವದಲ್ಲಿ ಜಿಲ್ಲೆಯ ನಿರ್ದೇಶಕರು ಹಾಗೂ ಜಿಲ್ಲಾ ಸಮಿತಿಯ ಪದಾಧಿಕಾರಿಗಳು ಎಲ್‌ಬಿಎಸ್ ನಗರದಲ್ಲಿರುವ ಮೃತರ ನಿವಾಸಕ್ಕೆ ಭೇಟಿ ನೀಡಿ ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿದರು. ಈ ದುಃಖದ ಸಂದರ್ಭದಲ್ಲಿ ಸಮಾಜವು ಕುಟುಂಬದೊಂದಿಗೆ ನಿಲ್ಲಲಿದೆ ಎಂದು ಧೈರ್ಯ ತುಂಬಿದರು.

ಕರ್ನಾಟಕ ಆರ್ಯವೈಶ್ಯ ಮಹಾಸಭಾದ ರಾಜ್ಯಾಧ್ಯಕ್ಷ ಆರ್.ಪಿ. ರವಿಶಂಕರ್ ಅವರು ಮೃತರ ಕುಟುಂಬದ ಸದಸ್ಯರೊಂದಿಗೆ ದೂರವಾಣಿಯಲ್ಲಿ ಮಾತನಾಡಿ ಸಾಂತ್ವನ ಹೇಳಿದರು. ಈ ಘಟನೆಯಿಂದ ಧೃತಿಗೆಡಬಾರದು. ಕರ್ನಾಟಕ ಆರ್ಯವೈಶ್ಯ ಮಹಾಸಭಾ ಹಾಗೂ ಸಮಾಜವು ಸದಾ ಕುಟುಂಬದ ಬೆಂಬಲಕ್ಕೆ ನಿಲ್ಲಲಿದ್ದು, ಅಗತ್ಯ ಆರ್ಥಿಕ ಮತ್ತು ಸಾಮಾಜಿಕ ಭದ್ರತೆ ಒದಗಿಸಲು ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮಾರ್ಕೆಟ್ ಯಾರ್ಡ್ ಪೊಲೀಸ್ ಠಾಣೆಯ ಪಿಐ ಉಮೇಶ್ ಕಾಂಬ್ಳೆ, ಕರ್ನಾಟಕ ಆರ್ಯವೈಶ್ಯ ಮಹಾಸಭಾ ಜಿಲ್ಲಾ ಸಮಿತಿ ಅಧ್ಯಕ್ಷ ಕೆ. ಭೀಮಾಶಂಕರ್, ಮಹಾಸಭಾದ ನಿರ್ದೇಶಕರಾದ ಜಗದೀಶ್ ಗುಪ್ತ, ದೇವನಪಲ್ಲಿ ವಾಸುದೇವ್, ಜಿಲ್ಲಾ ಸಮಿತಿ ಕಾರ್ಯದರ್ಶಿ ರಾಕೇಶ್ ರಾಜಲಬಂಡಿ, ನಿರ್ದೇಶಕರಾದ ಕೆ.ಸಿ. ವೀರೇಶ್ ವಕೀಲರು, ಮೈಲಾಪುರ ಎನ್. ಮೂರ್ತಿ, ಭವಾನಿ ವೀರೇಶ್, ಆನಂದ್ ಗುರುಗುಂಟಾ, ವಿಜ್ಞಾನ ವೆಂಕಟೇಶ, ಎಂ.ಆರ್. ಹನುಮಂತಯ್ಯ ಶೆಟ್ಟಿ, ತಿಮ್ಮಯ್ಯ ಶೆಟ್ಟಿ ಇಲ್ಲೂರು, ಅಣ್ಣ ಶ್ರೀಕಾಂತ, ವಿಕ್ರಂ ಬಾಪೂರು, ಪೆಂಡಾಲ್ ಕಿಶೋರ್, ಕಟ್ಟಾ ರಾಘವೇಂದ್ರ ಸೇರಿದಂತೆ ಸಮಾಜದ ಪ್ರಮುಖರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಕೃಷಿ ವಿಶ್ವವಿದ್ಯಾಲಯದಲ್ಲಿ 75 ಹುದ್ದೆಗಳ ನೇಮಕಾತಿಯಲ್ಲಿ ಅಕ್ರಮ ಆರೋಪ: ತನಿಖೆಗೆ ಜೆಡಿಎಸ್ ಆಗ್ರಹ

ನೇಮಕಾತಿ ಆದೇಶ ನೀಡಲಾಗಿದೆ ಎಂದು ಗಂಭೀರ ಆರೋಪ ಮಾಡಿದರು.

ನೇಮಕಾತಿ ಪ್ರಕ್ರಿಯೆಯಲ್ಲಿ ಸರ್ಕಾರದ ಆದೇಶಗಳು, ಅರ್ಹತಾ ಮಾನದಂಡಗಳು ಹಾಗೂ ಆರ್ಥಿಕ ಇಲಾಖೆಯ ನಿಯಮಗಳನ್ನು ಪಾಲಿಸಲಾಗಿದೆಯೇ ಎಂಬುದನ್ನು ಪರಿಶೀಲಿಸಬೇಕು. ನೇಮಕಾತಿಗೆ ಸಂಬಂಧಿಸಿದ ಎಲ್ಲ ದಾಖಲೆಗಳನ್ನು ವಶಕ್ಕೆ ಪಡೆದು ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಪ್ರಸ್ತುತ ಕುಲಪತಿಗಳು, ಸರ್ಕಾರದ ಮುಖ್ಯ ಕಾರ್ಯದರ್ಶಿ, ಸಂಬಂಧಪಟ್ಟ ಇಲಾಖೆಯ ಕಾರ್ಯದರ್ಶಿಗಳು ಹಾಗೂ ವಿಶ್ವವಿದ್ಯಾಲಯದ ಆಡಳಿತ ಮಂಡಳಿ ಕೂಡಲೇ ಮಧ್ಯಪ್ರವೇಶಿಸಿ ವಿವಾದಿತ ನೇಮಕಾತಿ ಆದೇಶಗಳನ್ನು ತಡೆಹಿಡಿಯಬೇಕು. ಆರೋಪಗಳು ಸಾಬೀತಾದಲ್ಲಿ ನೇಮಕಾತಿಗಳನ್ನು ರದ್ದುಗೊಳಿಸಿ ಅರ್ಹ ಅಭ್ಯರ್ಥಿಗಳಿಗೆ ನಿಯಮಾನುಸಾರ ಅವಕಾಶ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಅಕ್ರಮ ನೇಮಕಾತಿಯಲ್ಲಿ ಭಾಗಿಯಾಗಿರುವ ಆರೋಪ ಎದುರಿಸುತ್ತಿರುವ ಹನುಮಂತಪ್ಪ, ರಾಜಣ್ಣ ಸೇರಿದಂತೆ ಸಂಬಂಧಪಟ್ಟವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ ತನಿಖೆ ನಡೆಸಬೇಕು. ಆರೋಪಗಳು ದೃಢಪಟ್ಟಲ್ಲಿ ಕಾನೂನು ಕ್ರಮ ಕೈಗೊಂಡು ಬಂಧಿಸಬೇಕು ಎಂದು ಎಂ. ವಿರೂಪಾಕ್ಷಿ ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ನರಸಪ್ಪ ಆಶಾಪುರ, ನರಸಿಂಹಲು ಕಟ್ಟಿಮನಿ, ಎಸ್. ರಾಜು, ರವಿ, ರಾಮಕೃಷ್ಣ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮಹಾನಗರ ಪಾಲಿಕೆಗೆ ₹200 ಕೋಟಿ ಅನುದಾನ ಎಲ್ಲಿ? ನ. 1ರಂದು ಪ್ರತಿಭಟನೆಗೆ ಎಐಎಂಐಎಂ ಎಚ್ಚರಿಕೆ

ಬಿ ವಿಭಾಗದಲ್ಲಿ 10 ಅಧಿಕಾರಿಗಳ ಕೊರತೆಯಿದ್ದು, ಗ್ರೇಡ್ ಸಿ ವಿಭಾಗದಲ್ಲಿ 8 ಹಾಗೂ ಗ್ರೇಡ್ ಡಿ ವಿಭಾಗದಲ್ಲಿ 71 ಹುದ್ದೆಗಳು ಖಾಲಿಯಿವೆ. ಒಟ್ಟು 520 ಅಧಿಕಾರಿಗಳು, ಸಿಬ್ಬಂದಿ ಹಾಗೂ ಪೌರಕಾರ್ಮಿಕರು ಹೊರಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ತಿಳಿಸಿದರು.

ನಗರಸಭೆಯನ್ನು ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸಿದರೂ ಅದಕ್ಕೆ ಅನುಗುಣವಾಗಿ ಹೆಚ್ಚುವರಿ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ನೇಮಿಸಿಲ್ಲ. ಇದರಿಂದ ಸಾರ್ವಜನಿಕ ಸೇವೆಗಳ ನಿರ್ವಹಣೆಗೆ ತೊಂದರೆಯಾಗುತ್ತಿದೆ. ಹೊರಗುತ್ತಿಗೆ ನೌಕರರ ಸೇವಾ ಭದ್ರತೆ ಮತ್ತು ನಿಯಮಾನುಸಾರ ಕಾಯಂಗೊಳಿಸುವ ಸಾಧ್ಯತೆಗಳ ಕುರಿತು ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ನವೆಂಬರ್ 1ರಂದು ಕನ್ನಡ ರಾಜ್ಯೋತ್ಸವದ ಅಂಗವಾಗಿ ಜಿಲ್ಲಾ ಉಸ್ತುವಾರಿ ಸಚಿವರು ಧ್ವಜಾರೋಹಣಕ್ಕೆ ಆಗಮಿಸುವ ಸಂದರ್ಭದಲ್ಲಿ ಎಐಎಂಐಎಂ ಪಕ್ಷದ ವತಿಯಿಂದ ಪ್ರತಿಭಟನೆ ನಡೆಸಲಾಗುವುದು. ಸರ್ಕಾರ ಘೋಷಿಸಿದ ₹200 ಕೋಟಿ ಅನುದಾನದ ಸ್ಥಿತಿಗತಿ, ಪಾಲಿಕೆಯ ಸಿಬ್ಬಂದಿ ಕೊರತೆ ಹಾಗೂ ಸಾರ್ವಜನಿಕರ 17 ಪ್ರಮುಖ ಸಮಸ್ಯೆಗಳಿಗೆ ಸ್ಪಷ್ಟ ಉತ್ತರ ನೀಡಬೇಕು ಎಂದು ಶಬೀರ್ ಅಹ್ಮದ್ ಹೌದಡಿ ಆಗ್ರಹಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಶೈಬಜ್ ಖಾನ್, ಸಮೀರ್ ಅಹ್ಮದ್ ಖಾನ್, ಪ್ರವೀಣ ಬೇಗಂ, ಸಂತೋಷ್ ಸೂರ್ಯವಂಶಿ, ಈರಾಣೇಶ್ ಭೋವಿ, ರೆಹಮಾನ್ ಹಾಗೂ ಇರ್ಫಾನ್ ಖಾನ್ ಉಪಸ್ಥಿತರಿದ್ದರು.

ಗ್ರಾಮೀಣ ಅಭಿವೃದ್ಧಿ ಮತ್ತು ಸಮುದಾಯ ಸೇವೆಯಲ್ಲಿ ಯುವಜನತೆ ಸಕ್ರಿಯವಾಗಿ ತೊಡಗಿಸಿಕೊಳ್ಳಲಿ: ಮಲ್ಲಮ್ಮ ಮೇಟಿ



ರಾಯಚೂರು: ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಸಮಾಜಸೇವೆ, ಗ್ರಾಮೀಣ ಅಭಿವೃದ್ಧಿ ಹಾಗೂ ಸಮುದಾಯದ ಪ್ರಗತಿಗೆ ತಮ್ಮದೇ ಆದ ಕೊಡುಗೆ ನೀಡಬೇಕು. ಸ್ವಾರ್ಥ ಮನೋಭಾವ ತೊರೆದು ಪರೋಪಕಾರ, ಸಹಕಾರ ಮತ್ತು ಸೇವಾ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದು ಹಿರಿಯ ಉಪನ್ಯಾಸಕಿ ಮಲ್ಲಮ್ಮ ಮೇಟಿ ಕರೆ ನೀಡಿದರು.

ನಗರದ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಘಟಕದ ವತಿಯಿಂದ 2026-27ನೇ ಸಾಲಿನ ವಾರ್ಷಿಕ ವಿಶೇಷ ಶಿಬಿರದ ಅಂಗವಾಗಿ ಅಕ್ಟೋಬರ್ 30ರಂದು ಬಹೇರೂನ್‌ಖಿಲ್ಲಾ ಪ್ರದೇಶದಲ್ಲಿ ಆಯೋಜಿಸಿದ್ದ ಎರಡನೇ ದಿನದ ಕಾರ್ಯಕ್ರಮದಲ್ಲಿ ಎನ್‌ಎಸ್‌ಎಸ್ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ರಾಷ್ಟ್ರೀಯ ಸೇವಾ ಯೋಜನೆಯು ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಜವಾಬ್ದಾರಿ ಮತ್ತು ಸೇವಾ ಮನೋಭಾವ ಬೆಳೆಸುವ ಮಹತ್ವದ ವೇದಿಕೆಯಾಗಿದೆ. ಗ್ರಾಮೀಣ ಪ್ರದೇಶಗಳ ಸಮಸ್ಯೆಗಳನ್ನು ಅರಿತು ಅವುಗಳ ಪರಿಹಾರಕ್ಕೆ ಕೈಜೋಡಿಸುವುದು ಪ್ರತಿಯೊಬ್ಬ ಶಿಬಿರಾರ್ಥಿಯ ಕರ್ತವ್ಯವಾಗಿದೆ. ಗ್ರಾಮಗಳ ಸ್ವಚ್ಛತೆ, ಪರಿಸರ ಸಂರಕ್ಷಣೆ, ಆರೋಗ್ಯ ಜಾಗೃತಿ ಹಾಗೂ ಸಮುದಾಯದ ಅಭಿವೃದ್ಧಿ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳು ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಾ. ರವೀಂದ್ರ ಎಸ್. ಬಂಡಿ ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನೆಯು ವಿದ್ಯಾರ್ಥಿಗಳಲ್ಲಿ ಶಿಸ್ತು, ನಾಯಕತ್ವ, ಸಹಬಾಳ್ವೆ ಹಾಗೂ ಸಮಾಜಮುಖಿ ಚಿಂತನೆಗಳನ್ನು ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ವಿದ್ಯಾರ್ಥಿಗಳು ಪಠ್ಯ ಶಿಕ್ಷಣಕ್ಕೆ ಮಾತ್ರ ಸೀಮಿತರಾಗದೆ ಸಮಾಜದ ವಾಸ್ತವಿಕ ಸಮಸ್ಯೆಗಳನ್ನು ಅರ್ಥಮಾಡಿಕೊಂಡು ಅವುಗಳ ಪರಿಹಾರಕ್ಕೆ ಶ್ರಮಿಸಬೇಕು ಎಂದು ಹೇಳಿದರು.

ಗ್ರಾಮೀಣ ಅಭಿವೃದ್ಧಿಗಾಗಿ ಸರ್ಕಾರ ಜಾರಿಗೊಳಿಸಿರುವ ವಿವಿಧ ಯೋಜನೆಗಳು ಮತ್ತು ಸೌಲಭ್ಯಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಜವಾಬ್ದಾರಿಯೂ ವಿದ್ಯಾರ್ಥಿಗಳ ಮೇಲಿದೆ. ವಿಶೇಷವಾಗಿ ಗ್ರಾಮೀಣ ಜನರಿಗೆ ಸರ್ಕಾರದ ಜನಪರ ಯೋಜನೆಗಳ ಮಾಹಿತಿ ತಲುಪಿಸುವ ಮೂಲಕ ಅವುಗಳ ಸದುಪಯೋಗ ಪಡೆಯಲು ನೆರವಾಗಬೇಕು. ಎನ್‌ಎಸ್‌ಎಸ್ ಶಿಬಿರಗಳು ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನದ ಜೊತೆಗೆ ಸಮಾಜದೊಂದಿಗೆ ನಿಕಟ ಸಂಪರ್ಕ ಬೆಳೆಸಲು ಸಹಕಾರಿಯಾಗುತ್ತವೆ ಎಂದು ತಿಳಿಸಿದರು.

ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಮಹಿಬೂಬ್ ಸಾಬ್ ಮಾತನಾಡಿ, ಶಿಬಿರದ ಎರಡನೇ ದಿನದ ವಿವಿಧ ಚಟುವಟಿಕೆಗಳ ಕುರಿತು ಮಾಹಿತಿ ನೀಡಿದರು. ಗ್ರಾಮೀಣ ಅಭಿವೃದ್ಧಿ ಮತ್ತು ಸಮುದಾಯ ಸೇವೆಯನ್ನು ಪ್ರತಿಯೊಬ್ಬ ಸ್ವಯಂಸೇವಕ ತನ್ನ ಪ್ರಮುಖ ಗುರಿಯನ್ನಾಗಿ ಮಾಡಿಕೊಳ್ಳಬೇಕು. ಸೇವಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುವ ಮೂಲಕ ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ತರಲು ಶ್ರಮಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಉಪನ್ಯಾಸಕರಾದ ರೂತ್ ನಳಿನಿ, ಶರಣಮ್ಮ, ಭಾನುಪ್ರಿಯಾ ಹಾಗೂ ಎನ್‌ಎಸ್‌ಎಸ್ ಸ್ವಯಂಸೇವಕರು ಉಪಸ್ಥಿತರಿದ್ದರು.

ಶಿಬಿರಾರ್ಥಿ ಪ್ರಜ್ವಲ್ ಪ್ರಾರ್ಥಿಸಿದರು. ಶ್ರೀಕಾಂತ್ ಮತ್ತು ವಿವೇಕ್ ನೇತೃತ್ವದ ತಂಡ ಎನ್‌ಎಸ್‌ಎಸ್ ಗೀತೆಯನ್ನು ಹಾಡುವ ಮೂಲಕ ಕಾರ್ಯಕ್ರಮಕ್ಕೆ ಸ್ವಾಗತ ಕೋರಿತು. ಶಿಬಿರಾರ್ಥಿ ಭಾರ್ಗವ ವಂದನಾರ್ಪಣೆ ಸಲ್ಲಿಸಿದರು.

ಸಿಂದಗಿ ತಾಲ್ಲೂಕಿನಲ್ಲಿ ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕಲು ಭೀಮರಾಜ ಸೇನೆ ಆಗ್ರಹ



ದೇವದುರ್ಗ: ವಿಜಯಪುರ ಜಿಲ್ಲೆಯ ಸಿಂದಗಿ ತಾಲ್ಲೂಕಿನಲ್ಲಿ ಅಕ್ರಮವಾಗಿ ಮದ್ಯ ಮಾರಾಟ ನಡೆಯುತ್ತಿದೆ ಎಂಬ ಆರೋಪಗಳ ಹಿನ್ನೆಲೆಯಲ್ಲಿ, ಈ ಚಟುವಟಿಕೆಗಳಿಗೆ ತಕ್ಷಣ ಕಡಿವಾಣ ಹಾಕುವುದರ ಜೊತೆಗೆ ಅಬಕಾರಿ ಇಲಾಖೆಯ ಅಧಿಕಾರಿಗಳ ಕಾರ್ಯನಿರ್ವಹಣೆ ಕುರಿತು ಸಮಗ್ರ ತನಿಖೆ ನಡೆಸುವಂತೆ ಭೀಮರಾಜ ಸೇನೆ ಕರ್ನಾಟಕ ಸಂಘಟನೆ ಒತ್ತಾಯಿಸಿದೆ.

ಈ ಸಂಬಂಧ ಸಂಘಟನೆಯ ದೇವದುರ್ಗ ತಾಲೂಕು ಘಟಕದ ಪದಾಧಿಕಾರಿಗಳು ತಾಲೂಕು ದಂಡಾಧಿಕಾರಿ ಹಾಗೂ ಅಬಕಾರಿ ಇಲಾಖೆಯ ಜಂಟಿ ಆಯುಕ್ತರಿಗೆ ಮನವಿ ಸಲ್ಲಿಸಿ, ಅಕ್ರಮ ಮದ್ಯ ವಹಿವಾಟು ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ ಜರುಗಿಸುವಂತೆ ಆಗ್ರಹಿಸಿದರು.

ಸಿಂದಗಿ ತಾಲ್ಲೂಕಿನ ವಿವಿಧೆಡೆ ನಿಯಮಬಾಹಿರವಾಗಿ ಮದ್ಯ ಮಾರಾಟ ನಡೆಯುತ್ತಿದೆ ಎಂಬ ದೂರುಗಳು ಕೇಳಿಬರುತ್ತಿದ್ದರೂ, ಸಂಬಂಧಪಟ್ಟ ಅಧಿಕಾರಿಗಳು ಪರಿಣಾಮಕಾರಿಯಾಗಿ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಸಂಘಟನೆ ಆರೋಪಿಸಿದೆ. ಈ ಕುರಿತು ಸಾರ್ವಜನಿಕರಿಂದ ವ್ಯಕ್ತವಾಗಿರುವ ದೂರುಗಳನ್ನು ಗಂಭೀರವಾಗಿ ಪರಿಗಣಿಸಿ, ವಾಸ್ತವಾಂಶ ಪತ್ತೆಹಚ್ಚಲು ಉನ್ನತ ಮಟ್ಟದ ತನಿಖೆ ನಡೆಸಬೇಕು ಎಂದು ಮನವಿಯಲ್ಲಿ ತಿಳಿಸಲಾಗಿದೆ.

ವಿಶೇಷವಾಗಿ ಸಿಂದಗಿ ತಾಲ್ಲೂಕಿನ ಅಬಕಾರಿ ಸಿಪಿಐ ಶಿವಾನಂದ ಹೋಗಾರ ಅವರ ಕರ್ತವ್ಯ ನಿರ್ವಹಣೆ ಕುರಿತು ಪರಿಶೀಲನೆ ನಡೆಸಬೇಕು. ಅಕ್ರಮ ಮದ್ಯ ಮಾರಾಟ ನಿಯಂತ್ರಿಸುವಲ್ಲಿ ನಿರ್ಲಕ್ಷ್ಯ ಅಥವಾ ಕರ್ತವ್ಯಲೋಪ ಕಂಡುಬಂದಲ್ಲಿ, ತನಿಖಾ ವರದಿಯ ಆಧಾರದಲ್ಲಿ ಅಮಾನತು ಸೇರಿದಂತೆ ಕಾನೂನುಬದ್ಧ ಶಿಸ್ತುಕ್ರಮ ಜರುಗಿಸಬೇಕು ಎಂದು ಸಂಘಟನೆ ಒತ್ತಾಯಿಸಿದೆ.

ಅಕ್ರಮ ಮದ್ಯ ಮಾರಾಟದಿಂದ ಸಾರ್ವಜನಿಕ ನೆಮ್ಮದಿ ಹಾಗೂ ಸಾಮಾಜಿಕ ಸ್ವಾಸ್ಥ್ಯದ ಮೇಲೆ ಪ್ರತಿಕೂಲ ಪರಿಣಾಮ ಉಂಟಾಗುವ ಆತಂಕವಿದೆ. ಹೀಗಾಗಿ ಅಬಕಾರಿ ಇಲಾಖೆಯ ಹಿರಿಯ ಅಧಿಕಾರಿಗಳು ಈ ವಿಚಾರದಲ್ಲಿ ಮಧ್ಯಪ್ರವೇಶಿಸಿ, ದೂರುಗಳ ಸತ್ಯಾಸತ್ಯತೆ ಪರಿಶೀಲಿಸುವುದರೊಂದಿಗೆ ಅಕ್ರಮ ಚಟುವಟಿಕೆಗಳು ಕಂಡುಬಂದಲ್ಲಿ ಅವುಗಳನ್ನು ಸಂಪೂರ್ಣವಾಗಿ ನಿಯಂತ್ರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಲಾಗಿದೆ.

ಅಕ್ರಮ ಮದ್ಯ ಮಾರಾಟದ ಆರೋಪಗಳನ್ನು ನಿರ್ಲಕ್ಷಿಸದೆ, ಪಾರದರ್ಶಕ ಹಾಗೂ ನಿಷ್ಪಕ್ಷಪಾತ ತನಿಖೆಯ ಮೂಲಕ ತಪ್ಪಿತಸ್ಥರ ವಿರುದ್ಧ ನಿಯಮಾನುಸಾರ ಕ್ರಮ ಜರುಗಿಸಬೇಕು. ಸಾರ್ವಜನಿಕ ಹಿತಾಸಕ್ತಿ ಕಾಪಾಡುವ ನಿಟ್ಟಿನಲ್ಲಿ ಸಂಬಂಧಪಟ್ಟ ಇಲಾಖೆಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂದು ಭೀಮರಾಜ ಸೇನೆ ಕರ್ನಾಟಕ ಮನವಿ ಮಾಡಿದೆ.

ಈ ಸಂದರ್ಭದಲ್ಲಿ ಸಂಘಟನೆಯ ಶಿವಪ್ಪ ಬಲ್ಲಿದವ, ಗುಂಡಪ್ಪ ಬೆಂಡೆಗಂಬಳ್ಳಿ, ರಮೇಶ, ಮಲ್ಲಪ್ಪ, ದುರ್ಗಪ್ಪ ಬಿ., ಹೊನ್ನಯ್ಯ ಕರೆಗುಡ್ಡ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಅಪರಿಚಿತರಿಂದ ಕಿರುಕುಳ ಎದುರಾದರೆ ತಕ್ಷಣ ಪಾಲಕರು, ಶಿಕ್ಷಕರಿಗೆ ತಿಳಿಸಿ: ನ್ಯಾಯಾಧೀಶ ಆನಂದ ಎಚ್. ಕೊಣ್ಣೂರು



ಮಾನ್ವಿ: ಮಕ್ಕಳು ಅಪರಿಚಿತ ವ್ಯಕ್ತಿಗಳಿಂದ ಯಾವುದೇ ರೀತಿಯ ಕಿರುಕುಳ, ಮಾನಸಿಕ ಹಿಂಸೆ ಅಥವಾ ಲೈಂಗಿಕ ದೌರ್ಜನ್ಯಕ್ಕೆ ಒಳಗಾದಲ್ಲಿ ಭಯಪಡದೆ ತಕ್ಷಣ ಪಾಲಕರು, ಶಿಕ್ಷಕರು ಅಥವಾ ಶಾಲೆಯ ಮುಖ್ಯಗುರುಗಳಿಗೆ ಮಾಹಿತಿ ನೀಡಬೇಕು. ಇದರಿಂದ ಕಾನೂನಿನ ರಕ್ಷಣೆ ಹಾಗೂ ಅಗತ್ಯ ನೆರವು ಪಡೆಯಲು ಸಾಧ್ಯವಾಗುತ್ತದೆ ಎಂದು ಕಿರಿಯ ಸಿವಿಲ್ ನ್ಯಾಯಾಧೀಶ ಆನಂದ ಎಚ್. ಕೊಣ್ಣೂರು ತಿಳಿಸಿದರು.

ತಾಲೂಕಿನ ಕಾತರಕಿ ಗ್ರಾಮದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ತಾಲೂಕು ನ್ಯಾಯವಾದಿಗಳ ಸಂಘ ಹಾಗೂ ಶಿಕ್ಷಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಸುರಕ್ಷಿತ್ ಬಚ್‌ಪನ್ ಅಭಿಯಾನದ ಅಂಗವಾಗಿ ಆಯೋಜಿಸಿದ್ದ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳ ಸುರಕ್ಷತೆ ಮತ್ತು ಅವರ ಹಕ್ಕುಗಳ ರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಮಕ್ಕಳು ತಮ್ಮ ಮೇಲೆ ನಡೆಯುವ ಯಾವುದೇ ರೀತಿಯ ದೌರ್ಜನ್ಯ ಅಥವಾ ಕಿರುಕುಳವನ್ನು ಮುಚ್ಚಿಡದೆ ವಿಶ್ವಾಸಾರ್ಹ ಹಿರಿಯರ ಗಮನಕ್ಕೆ ತರಬೇಕು. ಇಂತಹ ಸಂದರ್ಭಗಳಲ್ಲಿ ಪಾಲಕರು ಮತ್ತು ಶಿಕ್ಷಕರು ಮಕ್ಕಳ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ, ಅವರಿಗೆ ಧೈರ್ಯ ತುಂಬುವುದರ ಜೊತೆಗೆ ಸೂಕ್ತ ಕಾನೂನು ನೆರವು ದೊರಕಿಸಿಕೊಡಲು ಮುಂದಾಗಬೇಕು ಎಂದು ಸಲಹೆ ನೀಡಿದರು.

ಮಕ್ಕಳಲ್ಲಿ ಕಾನೂನಿನ ಅರಿವು ಮೂಡಿಸುವುದರಿಂದ ದೌರ್ಜನ್ಯ, ಶೋಷಣೆ ಹಾಗೂ ಅನ್ಯಾಯದ ವಿರುದ್ಧ ಧ್ವನಿ ಎತ್ತುವ ಧೈರ್ಯ ಬೆಳೆಯುತ್ತದೆ. ಶಾಲಾ ಹಂತದಲ್ಲಿಯೇ ಮಕ್ಕಳಿಗೆ ಅವರ ಹಕ್ಕುಗಳು, ವೈಯಕ್ತಿಕ ಸುರಕ್ಷತೆ ಹಾಗೂ ಕಾನೂನಿನ ರಕ್ಷಣೆಯ ಕುರಿತು ತಿಳಿವಳಿಕೆ ನೀಡುವುದು ಅತ್ಯಂತ ಅಗತ್ಯವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದ ವಕೀಲ ಯಲ್ಲಪ್ಪ ಹಿರೇಬಾದರದಿನ್ನಿ ಮಾತನಾಡಿ, ಬಾಲ್ಯವಿವಾಹ ಮತ್ತು ಬಾಲಕಾರ್ಮಿಕ ಪದ್ಧತಿಗಳು ಕಾನೂನುಬಾಹಿರವಾಗಿವೆ. ಮಕ್ಕಳ ಶಿಕ್ಷಣದ ಹಕ್ಕನ್ನು ಕಸಿದುಕೊಂಡು ಅವರನ್ನು ಕೃಷಿ ಅಥವಾ ಇತರ ದುಡಿಮೆಯಲ್ಲಿ ತೊಡಗಿಸುವುದು ಕಾನೂನಿನ ಪ್ರಕಾರ ಅಪರಾಧವಾಗಿದೆ. ಪ್ರತಿಯೊಂದು ಮಗುವಿಗೂ ಶಿಕ್ಷಣ ಪಡೆಯುವ, ಸುರಕ್ಷಿತ ವಾತಾವರಣದಲ್ಲಿ ಬೆಳೆಯುವ ಹಾಗೂ ಶೋಷಣೆಯಿಂದ ಮುಕ್ತವಾಗಿ ಬದುಕುವ ಹಕ್ಕಿದೆ ಎಂದು ತಿಳಿಸಿದರು.

ಆರ್ಥಿಕವಾಗಿ ಹಿಂದುಳಿದವರು ಹಾಗೂ ಕಾನೂನು ನೆರವಿನ ಅಗತ್ಯವಿರುವ ಅರ್ಹ ವ್ಯಕ್ತಿಗಳು ತಾಲೂಕು ಕಾನೂನು ಸೇವಾ ಸಮಿತಿಯ ಮೂಲಕ ಉಚಿತ ಕಾನೂನು ನೆರವು ಪಡೆಯಬಹುದು. ಸಾರ್ವಜನಿಕರು ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ್ ದೊಡ್ಮನಿ, ನ್ಯಾಯವಾದಿಗಳ ಸಂಘದ ಉಪಾಧ್ಯಕ್ಷ ಶಿವಪ್ಪ ನಾಯಕ, ವಕೀಲರಾದ ಶ್ರೀನಿವಾಸ, ಶಕೀಲ ಬದಾಯಿ, ಗೂಗಲ್ ನಾಗರಾಜ್, ಶಾಲೆಯ ಮುಖ್ಯಗುರು ಎಚ್.ಟಿ. ಪ್ರಕಾಶ ಬಾಬು, ಸಿಆರ್‌ಪಿ ಕಾಶೀನಾಥ, ಬಿಆರ್‌ಪಿ ಸಿದ್ಧಲಿಂಗಯ್ಯ ಸೇರಿದಂತೆ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ರಾಜ್ಯಮಟ್ಟದ ಹೊನಲು ಬೆಳಕಿನ ಕಬಡ್ಡಿ ಪಂದ್ಯಾವಳಿ: ವಿಜಯಪುರ ತಂಡ ಚಾಂಪಿಯನ್



ಜಾಲಹಳ್ಳಿ: ದಸರಾ ಹಬ್ಬದ ಅಂಗವಾಗಿ ಶ್ರೀ ದುರ್ಗಾದೇವಿ ಕಮಿಟಿ ವತಿಯಿಂದ ಜಾಲಹಳ್ಳಿಯಲ್ಲಿ ಆಯೋಜಿಸಲಾಗಿದ್ದ ಎರಡನೇ ವರ್ಷದ ರಾಜ್ಯಮಟ್ಟದ ಹೊನಲು ಬೆಳಕಿನ ಕಬಡ್ಡಿ ಪಂದ್ಯಾವಳಿ ಕ್ರೀಡಾಭಿಮಾನಿಗಳ ಗಮನ ಸೆಳೆಯಿತು. ವಿವಿಧೆಡೆಯಿಂದ ಆಗಮಿಸಿದ್ದ ತಂಡಗಳ ನಡುವೆ ನಡೆದ ರೋಚಕ ಹಣಾಹಣಿಯಲ್ಲಿ ವಿಜಯಪುರ ತಂಡ ಪ್ರಥಮ ಸ್ಥಾನ ಪಡೆದು ಚಾಂಪಿಯನ್ ಪಟ್ಟ ಅಲಂಕರಿಸಿತು.

ಪಂದ್ಯಾವಳಿಯುದ್ದಕ್ಕೂ ಆಟಗಾರರು ಉತ್ತಮ ಕ್ರೀಡಾ ಕೌಶಲ, ಚುರುಕಿನ ದಾಳಿ ಹಾಗೂ ಸಂಘಟಿತ ರಕ್ಷಣಾತ್ಮಕ ಆಟದ ಮೂಲಕ ಗಮನ ಸೆಳೆದರು. ಅಂತಿಮ ಹಂತದ ಪಂದ್ಯಗಳಲ್ಲಿ ತೀವ್ರ ಪೈಪೋಟಿ ಕಂಡುಬಂದಿದ್ದು, ವಿಜಯಪುರ ತಂಡ ಪ್ರಥಮ ಸ್ಥಾನ ಗಳಿಸಿದರೆ, ಕೊಪ್ಪಳ ತಂಡ ದ್ವಿತೀಯ ಸ್ಥಾನಕ್ಕೆ ತೃಪ್ತಿಪಟ್ಟುಕೊಂಡಿತು. ಆತಿಥೇಯ ಶ್ರೀ ದುರ್ಗಾದೇವಿ ಜಾಲಹಳ್ಳಿ ತಂಡ ತೃತೀಯ ಸ್ಥಾನ ಪಡೆದು ಸ್ಥಳೀಯ ಕ್ರೀಡಾಭಿಮಾನಿಗಳ ಮೆಚ್ಚುಗೆಗೆ ಪಾತ್ರವಾಯಿತು.

ವಿಜೇತ ತಂಡಗಳಿಗೆ ನಗದು ಬಹುಮಾನಗಳನ್ನು ವಿತರಿಸಲಾಯಿತು. ಪ್ರಥಮ ಸ್ಥಾನ ಪಡೆದ ವಿಜಯಪುರ ತಂಡಕ್ಕೆ ಕೊಪ್ರೇಶ್ ರಾವ್ ಧಣಿ ದೇಸಾಯಿ ಪ್ರಾಯೋಜಿಸಿದ ₹15,000 ನಗದು ಬಹುಮಾನ ನೀಡಲಾಯಿತು. ದ್ವಿತೀಯ ಸ್ಥಾನಕ್ಕೆ ಜಾಲಹಳ್ಳಿಯ ಪ್ರತೀಕ್ ಪಾಟೀಲ್ ನೀಡಿದ ₹10,000 ಹಾಗೂ ತೃತೀಯ ಸ್ಥಾನಕ್ಕೆ ಗೋವಿಂದಪ್ಪ ಹಲಗೇರಿ ನೀಡಿದ ₹7,500 ಬಹುಮಾನ ವಿತರಿಸಲಾಯಿತು.

ಅದೇ ರೀತಿ ಚತುರ್ಥ ಬಹುಮಾನವಾಗಿ ಮುದಗೋಟದ ವಕೀಲ ನಿರಂಜನ್ ಪ್ರಾಯೋಜಿಸಿದ ₹5,000 ಹಾಗೂ ಪಂಚಮ ಬಹುಮಾನವಾಗಿ ದೇವದುರ್ಗ ಬಿಜೆಪಿ ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷ ಅಬ್ದುಲ್ ರೆಹಮಾನ್ ಚೌದ್ರಿ ನೀಡಿದ ₹2,500 ನಗದು ಬಹುಮಾನಗಳನ್ನು ವಿತರಿಸಲಾಯಿತು.

ಪಂದ್ಯಾವಳಿಯ ಅಧ್ಯಕ್ಷತೆಯನ್ನು ಶಿವರಾಜ್ ಸಾಹುಕಾರ್ ಪಾಣಿ ವಹಿಸಿದ್ದರು. ಗ್ರಾಮೀಣ ಪ್ರದೇಶದಲ್ಲಿ ಇಂತಹ ರಾಜ್ಯಮಟ್ಟದ ಕ್ರೀಡಾಕೂಟಗಳನ್ನು ಆಯೋಜಿಸುವುದರಿಂದ ಸ್ಥಳೀಯ ಪ್ರತಿಭೆಗಳಿಗೆ ತಮ್ಮ ಸಾಮರ್ಥ್ಯ ಪ್ರದರ್ಶಿಸಲು ಉತ್ತಮ ವೇದಿಕೆ ದೊರೆಯುತ್ತದೆ. ಯುವಜನರಲ್ಲಿ ಕ್ರೀಡಾಸಕ್ತಿ ಬೆಳೆಸುವುದರ ಜೊತೆಗೆ ತಂಡದ ಮನೋಭಾವ ಹಾಗೂ ಕ್ರೀಡಾಸ್ಫೂರ್ತಿಯನ್ನು ಉತ್ತೇಜಿಸಲು ಇಂತಹ ಪಂದ್ಯಾವಳಿಗಳು ಸಹಕಾರಿಯಾಗಿವೆ.

ಪಂದ್ಯಾವಳಿಯಲ್ಲಿ ನಿರ್ಣಾಯಕರಾಗಿ ಅಮರೇಶ ನಾಯಕ ಕಡದರಹಾಳ್ ಕಾರ್ಯನಿರ್ವಹಿಸಿ ಪಂದ್ಯಗಳ ಸುಗಮ ನಿರ್ವಹಣೆಗೆ ಸಹಕರಿಸಿದರು.

ಈ ಸಂದರ್ಭದಲ್ಲಿ ಶಿವು ಧಣಿ ಪಾಣಿ ಸಾಹುಕಾರ್, ಪ್ರಥಮ ದರ್ಜೆ ಗುತ್ತಿಗೆದಾರ ವೀರೇಶ್ ಅರಕೇರಿ, ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಎಲ್ಲಪ್ಪ ಗಚ್ಚಿನಮನೆ, ಹುಲುಗಪ್ಪ, ಹನುಮಂತರಾಯ ನೆಲ್ಲಿಂಗಿ, ಮಲ್ಲಿಕಾರ್ಜುನ್ ತಂದೆ ನಾಗಪ್ಪ ಹಡಪದ್, ರಮೇಶ್ ಸಾಲಿ, ವೀರೇಶ್ ಗೌಳಿ, ವೆಂಕಟೇಶ್ ಕಟ್ಟಿಮನಿ, ಸಿದ್ದರಾಮ್, ತಿರುಪತಿ ಹಡಪದ್, ಬಾಲಪ್ಪ ಲಿಂಗದಳ್ಳಿ, ಮಲ್ಲಿಕಾರ್ಜುನ್ ಭಜಂತ್ರಿ ಸೇರಿದಂತೆ ಕಮಿಟಿಯ ಪದಾಧಿಕಾರಿಗಳು, ಕ್ರೀಡಾಪಟುಗಳು ಹಾಗೂ ಕ್ರೀಡಾಭಿಮಾನಿಗಳು ಉಪಸ್ಥಿತರಿದ್ದರು.

ಸಾಮೂಹಿಕ ವಿವಾಹ ಸಮಾರಂಭಕ್ಕೆ ಮುಖ್ಯ ಪ್ರಾಣ ಮೆಲೋಡೀಸ್ ತಂಡದ ಸಂಗೀತ ರಸದೌತಣ



ಜಾಲಹಳ್ಳಿ: ಶ್ರೀ ಲಕ್ಷ್ಮೀ ರಂಗನಾಥ ಗೋವಿಂದ ಸೇವಾ ಸಮಿತಿ ಹಾಗೂ ಜಾಲಹಳ್ಳಿ ಸದ್ಭಕ್ತ ಮಂಡಳಿ ವತಿಯಿಂದ ಆಯೋಜಿಸಿದ್ದ ಸಾಮೂಹಿಕ ವಿವಾಹ ಸಮಾರಂಭದಲ್ಲಿ ಮುಖ್ಯ ಪ್ರಾಣ ಮೆಲೋಡೀಸ್ ಆರ್ಕೆಸ್ಟ್ರಾ ತಂಡದ ಸಂಗೀತ ಕಾರ್ಯಕ್ರಮ ನೆರೆದಿದ್ದ ಪ್ರೇಕ್ಷಕರ ಗಮನ ಸೆಳೆಯಿತು.

ಸಂಭ್ರಮದಿಂದ ನಡೆದ ಸಾಮೂಹಿಕ ವಿವಾಹ ಕಾರ್ಯಕ್ರಮಕ್ಕೆ ಸಂಗೀತದ ಮೆರುಗು ನೀಡುವ ಉದ್ದೇಶದಿಂದ ಜಾಲಹಳ್ಳಿಯ ಮುಖ್ಯ ಪ್ರಾಣ ಮೆಲೋಡೀಸ್ ತಂಡದ ವತಿಯಿಂದ ವಿಶೇಷ ಗಾಯನ ಕಾರ್ಯಕ್ರಮ ಆಯೋಜಿಸಲಾಗಿತ್ತು. ನರಸಿಂಹ ನಾಯಕ ಹಾಗೂ ಅಮರೇಶ ಬಿ.ಆರ್. ಗುಂಡ ಅವರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿವಿಧ ಪ್ರಕಾರದ ಗೀತೆಗಳನ್ನು ಪ್ರಸ್ತುತಪಡಿಸಲಾಯಿತು.

ಮೆಲೋಡಿ ಸ್ಟಾರ್ ಸುಷ್ಮಾ ಹಾಗೂ ಶೈನಿಂಗ್ ಸ್ಟಾರ್ ಲತಾ ಅವರು ಭಕ್ತಿಗೀತೆಗಳು, ಚಲನಚಿತ್ರ ಗೀತೆಗಳು, ಜನಪದ ಗೀತೆಗಳು ಮತ್ತು ಭಾವಗೀತೆಗಳನ್ನು ಹಾಡುವ ಮೂಲಕ ಪ್ರೇಕ್ಷಕರ ಮನಗೆದ್ದರು. ಅವರ ಸುಮಧುರ ಗಾಯನಕ್ಕೆ ನೆರೆದಿದ್ದ ಸಂಗೀತಾಸಕ್ತರು ಚಪ್ಪಾಳೆ ತಟ್ಟಿ ಮೆಚ್ಚುಗೆ ವ್ಯಕ್ತಪಡಿಸಿದರು.

ಗಾಯಕರಾದ ಆಂಜನೇಯ್ಯ ಪೊಲೀಸ್ ಪಾಟೀಲ್, ಜಾನಪದ ಗಾಯಕ ಮಂಜು ಗುಮೇದಾರ್, ಅಮರೇಶ ಬಿ.ಆರ್. ಗುಂಡ ಹಾಗೂ ಚಂದ್ರು ಕೆ. ಸೋಮನಮರಡಿ ಅವರು ವಿವಿಧ ಗೀತೆಗಳನ್ನು ಹಾಡಿ ಸಂಗೀತ ರಸದೌತಣ ಉಣಬಡಿಸಿದರು. ವಿಶೇಷವಾಗಿ ರೈತ ಗೀತೆಗಳು ಹಾಗೂ ಜನಪದ ಗೀತೆಗಳ ಗಾಯನ ಪ್ರೇಕ್ಷಕರಲ್ಲಿ ಉತ್ಸಾಹ ಮೂಡಿಸಿತು.

ಸಾಮೂಹಿಕ ವಿವಾಹದ ಧಾರ್ಮಿಕ ಹಾಗೂ ಸಾಂಪ್ರದಾಯಿಕ ಆಚರಣೆಗಳೊಂದಿಗೆ ಸಂಗೀತ ಕಾರ್ಯಕ್ರಮವೂ ನಡೆದಿದ್ದು, ಸಮಾರಂಭಕ್ಕೆ ವಿಶೇಷ ಕಳೆ ತಂದಿತು. ನೂತನ ವಧು-ವರರಿಗೆ ಹಿರಿಯರು ಆಶೀರ್ವದಿಸಿ, ಅವರ ದಾಂಪತ್ಯ ಜೀವನ ಸುಖ, ಶಾಂತಿ ಹಾಗೂ ಸಮೃದ್ಧಿಯಿಂದ ಕೂಡಿರಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಗ್ರಾಮದ ಮುಖಂಡರು, ಶ್ರೀ ಲಕ್ಷ್ಮೀ ರಂಗನಾಥ ಗೋವಿಂದ ಸೇವಾ ಸಮಿತಿ ಹಾಗೂ ಸದ್ಭಕ್ತ ಮಂಡಳಿಯ ಸದಸ್ಯರು, ಸುತ್ತಮುತ್ತಲಿನ ಗ್ರಾಮಗಳ ನೂರಾರು ಸಾರ್ವಜನಿಕರು ಮತ್ತು ಸಂಗೀತಾಭಿಮಾನಿಗಳು ಭಾಗವಹಿಸಿದ್ದರು.

ಪಾರ್ಶ್ವವಾಯು ಲಕ್ಷಣ ಕಂಡುಬಂದರೆ ಪ್ರತಿ ನಿಮಿಷವೂ ಅಮೂಲ್ಯ: ಅರವಿಂದ್ ಕುಮಾರ್



ಮಟಮಾರಿ: ಪಾರ್ಶ್ವವಾಯು ಸಂಭವಿಸಿದ ಸಂದರ್ಭದಲ್ಲಿ ಪ್ರತಿ ನಿಮಿಷವೂ ಅತ್ಯಂತ ಅಮೂಲ್ಯವಾಗಿದ್ದು, ಆರಂಭಿಕ ಲಕ್ಷಣಗಳನ್ನು ಗುರುತಿಸಿ ತಕ್ಷಣ ವೈದ್ಯಕೀಯ ಚಿಕಿತ್ಸೆ ಕೊಡಿಸುವುದರಿಂದ ಜೀವ ಉಳಿಸುವುದರ ಜೊತೆಗೆ ಶಾಶ್ವತ ಅಂಗವೈಕಲ್ಯದ ಅಪಾಯವನ್ನೂ ಕಡಿಮೆ ಮಾಡಬಹುದು ಎಂದು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಅರವಿಂದ್ ಕುಮಾರ್ ತಿಳಿಸಿದರು.

ವಿಶ್ವ ಪಾರ್ಶ್ವವಾಯು ದಿನಾಚರಣೆ ಅಂಗವಾಗಿ ಅಕ್ಟೋಬರ್ 29ರಂದು ಮಟಮಾರಿಯ ಪದವಿ ಪೂರ್ವ ಕಾಲೇಜಿನಲ್ಲಿ ಆಯೋಜಿಸಲಾಗಿದ್ದ ಪಾರ್ಶ್ವವಾಯು ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರತಿ ವರ್ಷ ಅಕ್ಟೋಬರ್ 29ರಂದು ವಿಶ್ವ ಪಾರ್ಶ್ವವಾಯು ದಿನವನ್ನು ಆಚರಿಸಲಾಗುತ್ತಿದ್ದು, ಸಾರ್ವಜನಿಕರಲ್ಲಿ ಈ ಕಾಯಿಲೆಯ ಕುರಿತು ಅರಿವು ಮೂಡಿಸುವುದು ಹಾಗೂ ತುರ್ತು ಚಿಕಿತ್ಸೆಯ ಮಹತ್ವವನ್ನು ತಿಳಿಸುವುದು ಇದರ ಪ್ರಮುಖ ಉದ್ದೇಶವಾಗಿದೆ. ಪಾರ್ಶ್ವವಾಯು ಮೆದುಳಿಗೆ ರಕ್ತ ಪೂರೈಕೆಯಲ್ಲಿ ಅಡಚಣೆ ಉಂಟಾದಾಗ ಅಥವಾ ಮೆದುಳಿನ ರಕ್ತನಾಳ ಒಡೆದಾಗ ಸಂಭವಿಸುವ ಗಂಭೀರ ಆರೋಗ್ಯ ಸಮಸ್ಯೆಯಾಗಿದೆ ಎಂದು ವಿವರಿಸಿದರು.

ಪಾರ್ಶ್ವವಾಯುವಿನ ಆರಂಭಿಕ ಲಕ್ಷಣಗಳನ್ನು ಗುರುತಿಸಲು 'ಬಿ ಫಾಸ್ಟ್' (Be Fast) ಸೂತ್ರವನ್ನು ಅನುಸರಿಸಬೇಕು. ಇದ್ದಕ್ಕಿದ್ದಂತೆ ದೇಹದ ಸಮತೋಲನ ತಪ್ಪುವುದು (Balance), ದೃಷ್ಟಿ ಮಸುಕಾಗುವುದು ಅಥವಾ ಕಾಣಿಸದಿರುವುದು (Eyes), ಮುಖದ ಒಂದು ಭಾಗ ಬಾಗುವುದು (Face), ಕೈಗಳಲ್ಲಿ ದೌರ್ಬಲ್ಯ ಕಾಣಿಸಿಕೊಳ್ಳುವುದು (Arms), ಮಾತು ತೊದಲುವುದು ಅಥವಾ ಸ್ಪಷ್ಟವಾಗಿ ಮಾತನಾಡಲು ಸಾಧ್ಯವಾಗದಿರುವುದು (Speech) ಪ್ರಮುಖ ಲಕ್ಷಣಗಳಾಗಿವೆ. ಇಂತಹ ಲಕ್ಷಣಗಳು ಕಂಡುಬಂದ ತಕ್ಷಣ ಸಮಯ ವ್ಯರ್ಥ ಮಾಡದೆ (Time) ತುರ್ತು ವೈದ್ಯಕೀಯ ಸೇವೆ ಪಡೆಯಬೇಕು ಎಂದು ಸಲಹೆ ನೀಡಿದರು.

ಅಧಿಕ ರಕ್ತದೊತ್ತಡ, ಮಧುಮೇಹ ಹಾಗೂ ರಕ್ತದಲ್ಲಿನ ಕೊಬ್ಬಿನಂಶ ಹೆಚ್ಚಾಗಿರುವುದು ಪಾರ್ಶ್ವವಾಯುವಿನ ಅಪಾಯವನ್ನು ಹೆಚ್ಚಿಸಬಹುದು. ಆದ್ದರಿಂದ ನಿಯಮಿತ ಆರೋಗ್ಯ ತಪಾಸಣೆ, ಸಮತೋಲಿತ ಆಹಾರ ಸೇವನೆ, ದೈಹಿಕ ವ್ಯಾಯಾಮ ಹಾಗೂ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳುವುದು ಅಗತ್ಯವಾಗಿದೆ. ಪಾರ್ಶ್ವವಾಯುವಿನ ಬಗ್ಗೆ ನಿರ್ಲಕ್ಷ್ಯ ವಹಿಸದೆ ಸಕಾಲದಲ್ಲಿ ಚಿಕಿತ್ಸೆ ಪಡೆಯುವುದರಿಂದ ಗಂಭೀರ ಪರಿಣಾಮಗಳನ್ನು ತಗ್ಗಿಸಬಹುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಕಾಲೇಜಿನ ಪ್ರಾಚಾರ್ಯೆ ಸುವರ್ಣ ಬೆಳಗಾವಿ, ವಿದ್ಯಾರ್ಥಿಗಳು ಬಾಲ್ಯದಿಂದಲೇ ಆರೋಗ್ಯಕರ ಜೀವನಶೈಲಿಯನ್ನು ರೂಢಿಸಿಕೊಳ್ಳಬೇಕು. ಧೂಮಪಾನ, ಮದ್ಯಪಾನದಂತಹ ದುಶ್ಚಟಗಳಿಂದ ದೂರವಿದ್ದು, ಪ್ರತಿದಿನ ದೈಹಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ಪೌಷ್ಟಿಕ ಆಹಾರ ಸೇವನೆ ಹಾಗೂ ನಿಯಮಿತ ಆರೋಗ್ಯ ತಪಾಸಣೆಗೆ ಆದ್ಯತೆ ನೀಡುವುದರಿಂದ ಅನೇಕ ಆರೋಗ್ಯ ಸಮಸ್ಯೆಗಳನ್ನು ತಡೆಗಟ್ಟಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಮಾನವ ಜೀವನ ಅತ್ಯಂತ ಅಮೂಲ್ಯವಾಗಿದ್ದು, ಬದುಕಿನ ಪ್ರತಿಯೊಂದು ಕ್ಷಣವನ್ನೂ ಅರ್ಥಪೂರ್ಣವಾಗಿ ಕಳೆಯಲು ಉತ್ತಮ ಆರೋಗ್ಯ ಅಗತ್ಯವಾಗಿದೆ. ವಿದ್ಯಾರ್ಥಿಗಳು ತಮ್ಮ ಆರೋಗ್ಯದ ಬಗ್ಗೆ ಕಾಳಜಿ ವಹಿಸುವುದರ ಜೊತೆಗೆ ಕುಟುಂಬದ ಸದಸ್ಯರು ಹಾಗೂ ಸಾರ್ವಜನಿಕರಲ್ಲಿಯೂ ಆರೋಗ್ಯ ಜಾಗೃತಿ ಮೂಡಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವಸಂತ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ವಿಜಯಲಕ್ಷ್ಮೀ, ಕಾಲೇಜಿನ ಉಪನ್ಯಾಸಕರಾದ ವೀರೇಂದ್ರ, ಶಿವರಾಜ್, ಬಸವರಾಜ್ ಸೇರಿದಂತೆ ಕಾಲೇಜಿನ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಬ್ಯಾಗವಾಟ ಗ್ರಾಮದ ಕುಡಿಯುವ ನೀರಿನ ಕೆರೆ ಭರ್ತಿಗೆ ಕ್ರಮ: ಇಒ ಖಾಲಿದ್ ಅಹಮ್ಮದ್



ಮಾನ್ವಿ: ತಾಲೂಕಿನ ಬ್ಯಾಗವಾಟ ಗ್ರಾಮದಲ್ಲಿ ಬೇಸಿಗೆ ಅವಧಿಯಲ್ಲಿಯೂ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು, ಗ್ರಾಮದ ಕುಡಿಯುವ ನೀರಿನ ಕೆರೆಯನ್ನು ಕಾಲುವೆ ನೀರಿನಿಂದ ಭರ್ತಿ ಮಾಡಲು ಅಗತ್ಯ ಕ್ರಮ ವಹಿಸಲಾಗುವುದು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಖಾಲಿದ್ ಅಹಮ್ಮದ್ ತಿಳಿಸಿದರು.

ತಾಲೂಕಿನ ಬ್ಯಾಗವಾಟ ಗ್ರಾಮದ ಕುಡಿಯುವ ನೀರಿನ ಕೆರೆಗೆ ಭೇಟಿ ನೀಡಿ, ನೀರಿನ ಸಂಗ್ರಹ ಹಾಗೂ ನಿರ್ವಹಣೆಯ ಸ್ಥಿತಿಗತಿಗಳನ್ನು ಪರಿಶೀಲಿಸಿದ ಬಳಿಕ ಅವರು ಮಾತನಾಡಿದರು.

ತಾಲೂಕಿನಲ್ಲಿ ಬರಗಾಲದ ಪರಿಸ್ಥಿತಿ ಇರುವ ಹಿನ್ನೆಲೆಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗದಂತೆ ಎಚ್ಚರಿಕೆ ವಹಿಸುವುದು ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಬ್ಯಾಗವಾಟ ಗ್ರಾಮದ ಜನರಿಗೆ ಸಮರ್ಪಕ ಕುಡಿಯುವ ನೀರು ಒದಗಿಸಲು ಕಾಲುವೆಯ ಮೂಲಕ ಕೆರೆಗೆ ನೀರು ಹರಿಸಿ ಭರ್ತಿ ಮಾಡುವ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಹೇಳಿದರು.

ಕೆರೆಯಲ್ಲಿ ಸಂಗ್ರಹವಾಗುವ ನೀರನ್ನು ಬೇಸಿಗೆಯವರೆಗೂ ಸಮರ್ಪಕವಾಗಿ ನಿರ್ವಹಿಸುವ ಜವಾಬ್ದಾರಿಯನ್ನು ಗ್ರಾಮ ಪಂಚಾಯಿತಿಗೆ ವಹಿಸಲಾಗುವುದು. ನೀರಿನ ಅನಗತ್ಯ ಪೋಲು ತಡೆಗಟ್ಟುವುದರ ಜೊತೆಗೆ ಗ್ರಾಮಸ್ಥರಿಗೆ ನಿರಂತರವಾಗಿ ಕುಡಿಯುವ ನೀರು ಪೂರೈಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಬರಗಾಲದ ಸಂದರ್ಭದಲ್ಲಿ ಕುಡಿಯುವ ನೀರಿನ ಮೂಲಗಳನ್ನು ಸಂರಕ್ಷಿಸುವುದು ಹಾಗೂ ಲಭ್ಯವಿರುವ ನೀರನ್ನು ಯೋಜಿತ ರೀತಿಯಲ್ಲಿ ಬಳಸಿಕೊಳ್ಳುವುದು ಅತ್ಯಂತ ಮುಖ್ಯವಾಗಿದೆ. ಗ್ರಾಮ ಪಂಚಾಯಿತಿ ಅಧಿಕಾರಿಗಳು ನೀರಿನ ಸಂಗ್ರಹ ಮತ್ತು ವಿತರಣೆಯ ಬಗ್ಗೆ ವಿಶೇಷ ಗಮನಹರಿಸಿ, ಸಾರ್ವಜನಿಕರಿಗೆ ತೊಂದರೆಯಾಗದಂತೆ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ಬ್ಯಾಗವಾಟ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶಿವಕುಮಾರ, ಪೋತ್ನಾಳ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಅಕ್ತರ್ ಸಾಬ್ ಸೇರಿದಂತೆ ಗ್ರಾಮ ಪಂಚಾಯಿತಿ ಸಿಬ್ಬಂದಿ ಉಪಸ್ಥಿತರಿದ್ದರು.

ಭೋವಿ ಜಾತಿ ಪ್ರಮಾಣಪತ್ರ ವಿಚಾರ: ಎಂಎಲ್‌ಸಿ ವಿ.ಎಸ್. ಉಗ್ರಪ್ಪ ಅವರಿಗೆ ಬೆದರಿಕೆ ಆರೋಪ ಖಂಡಿಸಿ ಮನವಿ

ಲಿಂಗಸುಗೂರು: ಭೋವಿ ಜಾತಿ ಪ್ರಮಾಣಪತ್ರದ ಸಮಸ್ಯೆ ಪರಿಹಾರಕ್ಕೆ ಶ್ರಮಿಸುತ್ತಿರುವ ವಿಧಾನ ಪರಿಷತ್ ಸದಸ್ಯ ವಿ.ಎಸ್. ಉಗ್ರಪ್ಪ ಅವರಿಗೆ ಶಿವಮೊಗ್ಗದಲ್ಲಿ ಕೆಲವರು ಘೇರಾವ್ ಹಾಕಿ ಬೆದರಿಕೆ ಒಡ್ಡಿದ್ದಾರೆ ಎಂದು ಆರೋಪಿಸಿ, ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಭೋವಿ ಸಮಾಜ ವಿವಿಧೋದ್ದೇಶ ಕಲ್ಯಾಣ ಸಂಘ ಆಗ್ರಹಿಸಿದೆ.



ಈ ಸಂಬಂಧ ಸಂಘದ ಅಧ್ಯಕ್ಷ ಶ್ರೀನಿವಾಸ ಭೋವಿ ನೇತೃತ್ವದಲ್ಲಿ ಪದಾಧಿಕಾರಿಗಳು ಹಾಗೂ ಸಮಾಜದ ಮುಖಂಡರು ಸಹಾಯಕ ಆಯುಕ್ತರ ಮೂಲಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಿ, ಅಕ್ಟೋಬರ್ 29ರಂದು ಶಿವಮೊಗ್ಗದಲ್ಲಿ ನಡೆದಿರುವುದಾಗಿ ಹೇಳಲಾದ ಘಟನೆಯನ್ನು ಖಂಡಿಸಿದರು.

ಭೋವಿ ಸಮುದಾಯದವರಿಗೆ ಪರಿಶಿಷ್ಟ ಜಾತಿ ಪ್ರಮಾಣಪತ್ರ ಪಡೆಯುವಲ್ಲಿ ಎದುರಾಗುತ್ತಿರುವ ತೊಂದರೆಗಳನ್ನು ನಿವಾರಿಸುವ ಉದ್ದೇಶದಿಂದ ರಾಜ್ಯ ಸರ್ಕಾರವು 2016ರಲ್ಲಿ ವಿ.ಎಸ್. ಉಗ್ರಪ್ಪ ಅವರ ನೇತೃತ್ವದಲ್ಲಿ 11 ವಿಧಾನ ಪರಿಷತ್ ಸದಸ್ಯರನ್ನು ಒಳಗೊಂಡ ವಿಶೇಷ ಸದನ ಸಮಿತಿಯನ್ನು ರಚಿಸಿತ್ತು. ಸಮಿತಿಯು ಎರಡು ವರ್ಷಗಳ ಕಾಲ ರಾಜ್ಯದ ವಿವಿಧೆಡೆ ಅಧ್ಯಯನ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸಿತ್ತು ಎಂದು ಮನವಿಯಲ್ಲಿ ವಿವರಿಸಲಾಗಿದೆ.

ಸಮಿತಿಯ ವರದಿಯಲ್ಲಿ ಭೋವಿ ಮತ್ತು ವಡ್ಡರ ಜಾತಿಗಳು ಪ್ರತ್ಯೇಕವಾಗಿದ್ದು, ಎರಡೂ ಸಮುದಾಯಗಳು ಪರಿಶಿಷ್ಟ ಜಾತಿಯ ಸೌಲಭ್ಯಗಳನ್ನು ಪಡೆಯಲು ಅರ್ಹವಾಗಿವೆ ಎಂದು ಉಲ್ಲೇಖಿಸಲಾಗಿದೆ. ಆದರೂ ಸಂಬಂಧಪಟ್ಟ ಅಧಿಕಾರಿಗಳು ಭೋವಿ ಹಾಗೂ ವಡ್ಡರ ಜಾತಿಗಳ ನಡುವಿನ ವ್ಯತ್ಯಾಸವನ್ನು ಸರಿಯಾಗಿ ಗುರುತಿಸದೆ, ಮೂಲ ಭೋವಿ ಸಮುದಾಯದವರಿಗೆ ಜಾತಿ ಪ್ರಮಾಣಪತ್ರ ನೀಡುವಲ್ಲಿ ವಿಳಂಬ ಮಾಡುತ್ತಿದ್ದಾರೆ. ಕೆಲವೆಡೆ ಅರ್ಜಿಗಳನ್ನು ತಿರಸ್ಕರಿಸಲಾಗುತ್ತಿದೆ ಎಂದು ಸಂಘದ ಪದಾಧಿಕಾರಿಗಳು ಆರೋಪಿಸಿದ್ದಾರೆ.

ರಾಜ್ಯದಲ್ಲಿ ಐದು ಲಕ್ಷಕ್ಕೂ ಅಧಿಕ ಮೂಲ ಭೋವಿ ಸಮುದಾಯದ ಜನರಿಗೆ ನ್ಯಾಯ ದೊರಕಿಸಿಕೊಡಲು ವಿ.ಎಸ್. ಉಗ್ರಪ್ಪ ಅವರು ನಿರಂತರವಾಗಿ ಪ್ರಯತ್ನಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ವಡ್ಡರ ಸಮುದಾಯದ ಕೆಲವರು ಅವರಿಗೆ ಘೇರಾವ್ ಹಾಕಿ ಬೆದರಿಕೆ ಒಡ್ಡಿರುವುದು ಖಂಡನೀಯ ಎಂದು ಸಂಘದ ಮುಖಂಡರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸಮುದಾಯಗಳ ನಡುವಿನ ಭಿನ್ನಾಭಿಪ್ರಾಯಗಳನ್ನು ಕಾನೂನುಬದ್ಧವಾಗಿ ಬಗೆಹರಿಸಿಕೊಳ್ಳಬೇಕೇ ಹೊರತು ಬೆದರಿಕೆ ಹಾಕುವ ಮೂಲಕ ಸಮಸ್ಯೆ ಪರಿಹರಿಸಲು ಸಾಧ್ಯವಿಲ್ಲ. ಈ ಹಿನ್ನೆಲೆಯಲ್ಲಿ ಘಟನೆಯ ಕುರಿತು ಸೂಕ್ತ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಜತೆಗೆ ಭೋವಿ ಸಮುದಾಯದವರಿಗೆ ಜಾತಿ ಪ್ರಮಾಣಪತ್ರ ಪಡೆಯುವಲ್ಲಿ ಎದುರಾಗುತ್ತಿರುವ ಸಮಸ್ಯೆಗಳನ್ನು ಶೀಘ್ರ ಪರಿಹರಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ರಾಮಣ್ಣ ಭೋವಿ, ಶರಣಬಸವ, ಶರಣಪ್ಪ, ನಿಂಗಪ್ಪ, ದೇವಪ್ಪ ಹುಣಕುಂಟಿ, ರಮೇಶ ಕಾಳಾಪುರ, ನಾರಾಯಣ, ಬಸವರಾಜ, ಹಲಗಪ್ಪ ಭೋವಿ ಸೇರಿದಂತೆ ಸಮಾಜದ ಮುಖಂಡರು ಹಾಗೂ ಸಂಘದ ಸದಸ್ಯರು ಉಪಸ್ಥಿತರಿದ್ದರು.

ಪ್ರೇಮದ ಊರಲಿ ಚಿತ್ರಕ್ಕೆ ಪ್ರೇಕ್ಷಕರ ಮೆಚ್ಚುಗೆ: ಶ್ರೀದೇವಿ ರಾಜಶೇಖರ ನಾಯಕ

ದೇವದುರ್ಗ: ಕುಟುಂಬ ಸಂಬಂಧಗಳು, ಪ್ರೀತಿ, ಸ್ನೇಹ, ತ್ಯಾಗ ಹಾಗೂ ಮಾನವೀಯ ಮೌಲ್ಯಗಳನ್ನು ಮನಮುಟ್ಟುವಂತೆ ಚಿತ್ರಿಸಿರುವ ಪ್ರೇಮದ ಊರಲಿ ಕನ್ನಡ ಚಲನಚಿತ್ರ ಪ್ರೇಕ್ಷಕರ ಮನಗೆಲ್ಲುವಲ್ಲಿ ಯಶಸ್ವಿಯಾಗಿದೆ ಎಂದು ರಾಷ್ಟ್ರೀಯ ಮಹಿಳಾ ಕಾಂಗ್ರೆಸ್ ಕಾರ್ಯದರ್ಶಿ ಶ್ರೀದೇವಿ ರಾಜಶೇಖರ ನಾಯಕ ಅಭಿಪ್ರಾಯಪಟ್ಟರು.



ಪಟ್ಟಣದ ಭಾರತ್ ಟಾಕೀಸ್ ಚಿತ್ರಮಂದಿರದಲ್ಲಿ 50ಕ್ಕೂ ಹೆಚ್ಚು ಮಹಿಳೆಯರಿಗೆ ಪ್ರೇಮದ ಊರಲಿ ಚಲನಚಿತ್ರ ವೀಕ್ಷಿಸಲು ವ್ಯವಸ್ಥೆ ಕಲ್ಪಿಸಿದ ಅವರು, ಚಿತ್ರ ವೀಕ್ಷಿಸಿದ ಬಳಿಕ ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು.

ಸೆಪ್ಟೆಂಬರ್ 25ರಂದು ರಾಜ್ಯದ 60 ಚಿತ್ರಮಂದಿರಗಳಲ್ಲಿ ಬಿಡುಗಡೆಯಾದ ಈ ಚಿತ್ರವು ಅಕ್ಟೋಬರ್ 29ರ ನಂತರವೂ ಪ್ರದರ್ಶನಗೊಳ್ಳುತ್ತಿರುವುದು ಸಂತಸದ ಸಂಗತಿಯಾಗಿದೆ. ಬುಕ್ ಮೈ ಶೋನಲ್ಲಿ ಚಿತ್ರಕ್ಕೆ 9.9 ರೇಟಿಂಗ್ ದೊರೆತಿರುವುದು ಕನ್ನಡ ಚಿತ್ರರಂಗಕ್ಕೆ ಹೆಮ್ಮೆಯ ವಿಷಯವಾಗಿದೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಚಿತ್ರದಲ್ಲಿ ತಂದೆ-ಮಗನ ಬಾಂಧವ್ಯ, ಅಣ್ಣ-ತಂಗಿಯ ಪ್ರೀತಿ, ಸ್ನೇಹಿತರ ನಡುವಿನ ವಿಶ್ವಾಸ ಹಾಗೂ ಪ್ರೇಮಿಗಳ ಭಾವನೆಗಳನ್ನು ಪರಿಣಾಮಕಾರಿಯಾಗಿ ಕಟ್ಟಿಕೊಡಲಾಗಿದೆ. ತಾಯಿಯಿಲ್ಲದ ಮಗನನ್ನು ತಂದೆಯೊಬ್ಬ ಸಮಾಜಕ್ಕೆ ಉತ್ತಮ ವ್ಯಕ್ತಿಯಾಗಿ ರೂಪಿಸುವ ಜವಾಬ್ದಾರಿಯನ್ನು ನಿರ್ವಹಿಸುವ ಕಥಾಹಂದರ ಪ್ರೇಕ್ಷಕರ ಮನಸ್ಸನ್ನು ಸ್ಪರ್ಶಿಸುತ್ತದೆ ಎಂದು ಹೇಳಿದರು.



ನಾಗಣ್ಣ, ಸಂತು, ರುಕ್ಮಿಣಿ ಹಾಗೂ ವಸಂತ ಪಾತ್ರಗಳು ಬದುಕಿನ ವಿವಿಧ ಆಯಾಮಗಳನ್ನು ಪ್ರತಿಬಿಂಬಿಸುತ್ತವೆ. ಕುಟುಂಬದ ಸದಸ್ಯರು ಮನೆಯ ನಾಲ್ಕು ಗೋಡೆಗಳಂತಿದ್ದರೆ, ತಂದೆ ಆ ಕುಟುಂಬಕ್ಕೆ ರಕ್ಷಣೆಯ ಮೇಲ್ಚಾವಣಿಯಂತೆ ನಿಲ್ಲುವ ಸಂದೇಶ ಚಿತ್ರದಲ್ಲಿದೆ. ಅನುಮಾನ ಕುಟುಂಬವನ್ನು ಒಡೆಯುತ್ತದೆ, ಪರಸ್ಪರ ಹೊಂದಾಣಿಕೆ ಒಡೆದ ಸಂಬಂಧಗಳನ್ನು ಮತ್ತೆ ಬೆಸೆಯುತ್ತದೆ ಎಂಬ ಜೀವನಮೌಲ್ಯವನ್ನು ಚಿತ್ರ ಸಾರುತ್ತದೆ ಎಂದು ವಿವರಿಸಿದರು.

ಕನ್ನಡ ಚಿತ್ರರಂಗದಲ್ಲಿ ಇಂತಹ ಕೌಟುಂಬಿಕ ಹಾಗೂ ಸಾಮಾಜಿಕ ಸಂದೇಶವುಳ್ಳ ಚಿತ್ರಗಳು ಹೆಚ್ಚಿನ ಸಂಖ್ಯೆಯಲ್ಲಿ ನಿರ್ಮಾಣವಾಗಬೇಕು. ಪ್ರೇಕ್ಷಕರು ಕುಟುಂಬ ಸಮೇತರಾಗಿ ಚಿತ್ರಮಂದಿರಗಳಿಗೆ ತೆರಳಿ ಕನ್ನಡ ಚಲನಚಿತ್ರಗಳನ್ನು ವೀಕ್ಷಿಸುವ ಮೂಲಕ ಕನ್ನಡ ಚಿತ್ರರಂಗವನ್ನು ಪ್ರೋತ್ಸಾಹಿಸಬೇಕು ಎಂದು ಕರೆ ನೀಡಿದರು.

ಪ್ರೀತಿ ಎಂದರೆ ಕೇವಲ ಪ್ರೇಮಿಗಳ ನಡುವಿನ ಸಂಬಂಧವಲ್ಲ. ತಂದೆಯ ವಾತ್ಸಲ್ಯ, ಕುಟುಂಬದ ಮೇಲಿನ ಕಾಳಜಿ, ಸ್ನೇಹಿತರ ವಿಶ್ವಾಸ ಹಾಗೂ ಪರಸ್ಪರ ಗೌರವವೂ ಪ್ರೀತಿಯ ವಿವಿಧ ರೂಪಗಳಾಗಿವೆ. ಈ ಎಲ್ಲ ಭಾವನೆಗಳನ್ನು ಪ್ರೇಮದ ಊರಲಿ ಚಿತ್ರದಲ್ಲಿ ಮನೋಜ್ಞವಾಗಿ ನಿರೂಪಿಸಲಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಚಿತ್ರದ ನಿರ್ದೇಶಕ ಮನೋಜ್ ಕುಮಾರ್ ಸೇರಿದಂತೆ ಎಲ್ಲ ಕಲಾವಿದರು, ತಂತ್ರಜ್ಞರು, ನಿರ್ಮಾಪಕರು ಹಾಗೂ ಚಿತ್ರತಂಡದ ಸದಸ್ಯರಿಗೆ ಅಭಿನಂದನೆ ಸಲ್ಲಿಸಿದ ಶ್ರೀದೇವಿ ರಾಜಶೇಖರ ನಾಯಕ, ಈ ಚಿತ್ರ ಇನ್ನಷ್ಟು ಪ್ರೇಕ್ಷಕರನ್ನು ತಲುಪಿ ಯಶಸ್ಸು ಕಾಣಲಿ ಎಂದು ಶುಭ ಹಾರೈಸಿದರು.

ನ. 2ರಿಂದ ರಾಜ್ಯಮಟ್ಟದ ಕರೋಕೆ ಗಾಯನ ಸ್ಪರ್ಧೆ

ಲಿಂಗಸುಗೂರು: ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ನವೆಂಬರ್ 2ರಿಂದ ರಾಜ್ಯಮಟ್ಟದ ಕರೋಕೆ ಗಾಯನ ಸ್ಪರ್ಧೆ ಆಯೋಜಿಸಲಾಗಿದ್ದು, ಅಂತಿಮ ಹಂತದ ಸ್ಪರ್ಧೆಯನ್ನು ರಾಯಚೂರು ಜಿಲ್ಲೆಯ ಲಿಂಗಸುಗೂರಿನಲ್ಲಿ ನಡೆಸಿ ವಿಜೇತರಿಗೆ ನಗದು ಬಹುಮಾನ ನೀಡಲಾಗುವುದು ಎಂದು ಆಯೋಜಕ ಚಾಮರಾಜ ತಿಳಿಸಿದರು.



ಪಟ್ಟಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಲಿಂಗಸುಗೂರಿನ ಒಡೆಯರ್ ಮೆಲೋಡಿಸ್ ಹಾಗೂ ರೋಜಾ ಇವೆಂಟ್ಸ್ ವತಿಯಿಂದ ಎದೆ ತುಂಬಿ ಹಾಡುವೆನು ಸೀಸನ್-1 ಹೆಸರಿನಲ್ಲಿ ರಾಜ್ಯಮಟ್ಟದ ಬೃಹತ್ ಕರೋಕೆ ಗಾಯನ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ನವೆಂಬರ್ 2ರಿಂದ ಗದಗ, ರಾಯಚೂರು, ಮಾನ್ವಿ, ಸಿಂಧನೂರು, ಶಹಾಪುರ, ದೇವದುರ್ಗ, ಗಂಗಾವತಿ ಹಾಗೂ ಮಸ್ಕಿ ಸೇರಿದಂತೆ ವಿವಿಧೆಡೆ ಸ್ಪರ್ಧೆಗಳು ನಡೆಯಲಿವೆ. ಅಂತಿಮ ಹಂತದ ಸ್ಪರ್ಧೆಯನ್ನು ಲಿಂಗಸುಗೂರಿನಲ್ಲಿ ಆಯೋಜಿಸಲಾಗುವುದು ಎಂದು ಮಾಹಿತಿ ನೀಡಿದರು.

ಗಾಯನ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ ಸ್ಪರ್ಧೆ ಹಮ್ಮಿಕೊಳ್ಳಲಾಗಿದ್ದು, ಭಾಗವಹಿಸುವ ಸ್ಪರ್ಧಿಗಳಿಗೆ ಯಾವುದೇ ವಯೋಮಿತಿ ಇರುವುದಿಲ್ಲ. ಆಸಕ್ತರು ನಿಗದಿತ ಪ್ರವೇಶ ಶುಲ್ಕ ಪಾವತಿಸಿ ಸ್ಪರ್ಧೆಯಲ್ಲಿ ಭಾಗವಹಿಸಬಹುದು. ಚಲನಚಿತ್ರ ಗೀತೆಗಳು, ಭಕ್ತಿಗೀತೆಗಳು, ಭಾವಗೀತೆಗಳು ಹಾಗೂ ಜನಪದ ಗೀತೆಗಳನ್ನು ಹಾಡಲು ಅವಕಾಶ ಕಲ್ಪಿಸಲಾಗಿದೆ ಎಂದು ವಿವರಿಸಿದರು.

ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆಯುವವರಿಗೆ ₹20 ಸಾವಿರ, ದ್ವಿತೀಯ ಸ್ಥಾನಕ್ಕೆ ₹10 ಸಾವಿರ ಹಾಗೂ ತೃತೀಯ ಸ್ಥಾನಕ್ಕೆ ₹5 ಸಾವಿರ ನಗದು ಬಹುಮಾನ ನೀಡಲಾಗುವುದು. ಇದರ ಜತೆಗೆ ಇಬ್ಬರು ಉತ್ತಮ ಗಾಯಕರಿಗೆ ತಲಾ ₹1,000 ಪ್ರೋತ್ಸಾಹ ಬಹುಮಾನ ನೀಡಿ ಗೌರವಿಸಲಾಗುವುದು ಎಂದು ತಿಳಿಸಿದರು.

ಸಂಗೀತದಲ್ಲಿ ಆಸಕ್ತಿ ಹೊಂದಿರುವ ಪ್ರತಿಭಾವಂತ ಗಾಯಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಗಾಯನ ಸಾಮರ್ಥ್ಯವನ್ನು ಪ್ರದರ್ಶಿಸಬೇಕು. ರಾಜ್ಯದ ವಿವಿಧ ಭಾಗಗಳ ಗಾಯಕರಿಗೆ ವೇದಿಕೆ ಕಲ್ಪಿಸುವುದು ಈ ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ ಎಂದು ಹೇಳಿದರು.

ಸ್ಪರ್ಧೆಯ ನೋಂದಣಿ ಹಾಗೂ ಹೆಚ್ಚಿನ ಮಾಹಿತಿಗಾಗಿ 9591864608 ಅಥವಾ 7019942303 ಮೊಬೈಲ್ ಸಂಖ್ಯೆಗಳನ್ನು ಸಂಪರ್ಕಿಸಬಹುದು ಎಂದು ಚಾಮರಾಜ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಂಜುಳಾ ಉಪಸ್ಥಿತರಿದ್ದರು.

ಬಗರ್ ಹುಕುಂ ಸಾಗುವಳಿದಾರರಿಗೆ ಹಕ್ಕುಪತ್ರ ನೀಡಲು ಆಗ್ರಹಿಸಿ ನ. 2ರಿಂದ ಅಹೋರಾತ್ರಿ ಧರಣಿ

ದೇವದುರ್ಗ, ಅ. 30: ಬಗರ್ ಹುಕುಂ ಸಾಗುವಳಿದಾರರಿಗೆ ಭೂಮಿಯ ಹಕ್ಕುಪತ್ರ ವಿತರಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಅಖಿಲ ಭಾರತ ರೈತ ಕೃಷಿ ಕಾರ್ಮಿಕರ ಸಂಘಟನೆ (ಎಐಕೆಕೆಎಂಎಸ್) ವತಿಯಿಂದ ನವೆಂಬರ್ 2 ಮತ್ತು 3ರಂದು ಪಟ್ಟಣದ ಮಿನಿ ವಿಧಾನಸೌಧದ ಎದುರು ಎರಡು ದಿನಗಳ ಅಹೋರಾತ್ರಿ ಧರಣಿ ನಡೆಸಲಾಗುವುದು ಎಂದು ಸಂಘಟನೆಯ ಜಿಲ್ಲಾ ಕಾರ್ಯದರ್ಶಿ ಮಲ್ಲನಗೌಡ ಅಂಚೆಸಗೂರು ತಿಳಿಸಿದರು.



ಪಟ್ಟಣದಲ್ಲಿ ಶುಕ್ರವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ದೇವದುರ್ಗ ಹಾಗೂ ಅರಕೇರಾ ತಾಲೂಕುಗಳಲ್ಲಿ ಸಾವಿರಾರು ಭೂಹೀನ ಬಡ ರೈತರು ಮತ್ತು ಕೃಷಿ ಕಾರ್ಮಿಕರು ಸರ್ಕಾರಿ ಕಂದಾಯ ಭೂಮಿ ಹಾಗೂ ಅರಣ್ಯದಂಚಿನ ಜಮೀನುಗಳಲ್ಲಿ ತಲೆಮಾರುಗಳಿಂದ ಸಾಗುವಳಿ ಮಾಡಿಕೊಂಡು ಜೀವನ ಸಾಗಿಸುತ್ತಿದ್ದಾರೆ. ಕಳೆದ 70ರಿಂದ 80 ವರ್ಷಗಳಿಂದ ಕೃಷಿ ಚಟುವಟಿಕೆಯಲ್ಲಿ ತೊಡಗಿಸಿಕೊಂಡಿದ್ದರೂ ಅನೇಕ ಕುಟುಂಬಗಳಿಗೆ ಇದುವರೆಗೆ ಭೂಮಿಯ ಮಾಲೀಕತ್ವದ ಹಕ್ಕುಪತ್ರ ದೊರೆತಿಲ್ಲ. ಇದರಿಂದ ರೈತರು ನಿರಂತರ ಅನಿಶ್ಚಿತತೆಯಲ್ಲಿ ಬದುಕುವಂತಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಭೂಮಿಯ ಹಕ್ಕುಪತ್ರ ಇಲ್ಲದ ಕಾರಣ ರೈತರಿಗೆ ಬ್ಯಾಂಕುಗಳಿಂದ ಬೆಳೆ ಸಾಲ ಹಾಗೂ ಕೃಷಿ ಸಾಲ ಪಡೆಯಲು ಸಾಧ್ಯವಾಗುತ್ತಿಲ್ಲ. ಕೃಷಿ ಚಟುವಟಿಕೆಗಳಿಗೆ ಅಗತ್ಯವಿರುವ ಬಂಡವಾಳಕ್ಕಾಗಿ ಖಾಸಗಿ ಸಾಲದಾತರನ್ನು ಅವಲಂಬಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಹೆಚ್ಚಿನ ಬಡ್ಡಿದರದ ಸಾಲದಿಂದ ಬಡ ರೈತರು ಮತ್ತಷ್ಟು ಆರ್ಥಿಕ ಸಂಕಷ್ಟಕ್ಕೆ ಸಿಲುಕುತ್ತಿದ್ದಾರೆ. ಸರ್ಕಾರ ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಸಾಗುವಳಿದಾರರಿಗೆ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದರು.

ಬಗರ್ ಹುಕುಂ ಸಾಗುವಳಿದಾರರು ನಮೂನೆ 50, 53 ಮತ್ತು 57ರ ಅಡಿಯಲ್ಲಿ ಸಲ್ಲಿಸಿರುವ ಅರ್ಜಿಗಳನ್ನು ಆದ್ಯತೆಯ ಮೇರೆಗೆ ಪರಿಶೀಲಿಸಿ ಅರ್ಹರಿಗೆ ಹಕ್ಕುಪತ್ರ ವಿತರಿಸಬೇಕು. ದೇವದುರ್ಗ ತಾಲೂಕಿನಲ್ಲಿ ಭೂ ಮಂಜೂರಾತಿ ಸಮಿತಿ ರಚನೆಯಾಗಿದ್ದರೂ ಅರ್ಜಿಗಳ ವಿಲೇವಾರಿ ಸಮರ್ಪಕವಾಗಿ ನಡೆಯುತ್ತಿಲ್ಲ. ಪರಿಣಾಮವಾಗಿ ವರ್ಷಗಳಿಂದ ಅರ್ಜಿ ಸಲ್ಲಿಸಿ ಕಾಯುತ್ತಿರುವ ರೈತರಿಗೆ ಯಾವುದೇ ಪರಿಹಾರ ದೊರೆತಿಲ್ಲ. ತಹಶೀಲ್ದಾರರು ಕೂಡಲೇ ಸಮಿತಿಯ ಸಭೆ ಕರೆದು ಬಾಕಿ ಅರ್ಜಿಗಳನ್ನು ಇತ್ಯರ್ಥಪಡಿಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ದೇವದುರ್ಗ ಮತ್ತು ಅರಕೇರಾ ತಾಲೂಕುಗಳ ಭೂ ಮಂಜೂರಾತಿ ಸಮಿತಿಗಳಿಗೆ ಸಂಬಂಧಿಸಿದ ಆಡಳಿತಾತ್ಮಕ ಗೊಂದಲಗಳನ್ನು ನಿವಾರಿಸಬೇಕು. ಅರಕೇರಾ ತಾಲೂಕಿನಲ್ಲಿ ಕಂದಾಯ ಭೂಮಿಯನ್ನು ಅರಣ್ಯ ಭೂಮಿಯಾಗಿ ಪರಿವರ್ತಿಸುವ ಕ್ರಮವನ್ನು ಕೈಬಿಡಬೇಕು. ಅರಣ್ಯದಂಚಿನ ಜಮೀನುಗಳಲ್ಲಿ ಹಲವು ವರ್ಷಗಳಿಂದ ಸಾಗುವಳಿ ಮಾಡುತ್ತಿರುವ ರೈತರಿಗೆ ಕಿರುಕುಳ ನೀಡುವುದನ್ನು ತಕ್ಷಣ ನಿಲ್ಲಿಸಬೇಕು ಎಂದು ಆಗ್ರಹಿಸಿದರು.

ಭೂಮಿಯನ್ನೇ ನಂಬಿ ಬದುಕುತ್ತಿರುವ ಬಡ ರೈತರಿಗೆ ಹಕ್ಕುಪತ್ರ ನೀಡದೆ ವಿಳಂಬ ಮಾಡುತ್ತಿರುವುದು ಅವರ ಜೀವನೋಪಾಯದ ಮೇಲೆ ಗಂಭೀರ ಪರಿಣಾಮ ಬೀರುತ್ತಿದೆ. ಸಾಗುವಳಿದಾರರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಕಂದಾಯ ಇಲಾಖೆ ಮತ್ತು ಸಂಬಂಧಪಟ್ಟ ಅಧಿಕಾರಿಗಳು ತುರ್ತು ಕ್ರಮ ಕೈಗೊಳ್ಳಬೇಕು. ರೈತರ ನ್ಯಾಯಯುತ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತರುವ ಉದ್ದೇಶದಿಂದ ಎರಡು ದಿನಗಳ ಅಹೋರಾತ್ರಿ ಧರಣಿ ಹಮ್ಮಿಕೊಳ್ಳಲಾಗಿದೆ ಎಂದು ವಿವರಿಸಿದರು.

ನವೆಂಬರ್ 2 ಮತ್ತು 3ರಂದು ನಡೆಯಲಿರುವ ಧರಣಿಯಲ್ಲಿ ದೇವದುರ್ಗ ಹಾಗೂ ಅರಕೇರಾ ತಾಲೂಕುಗಳ ಬಗರ್ ಹುಕುಂ ಸಾಗುವಳಿದಾರರು, ಭೂಹೀನ ರೈತರು ಮತ್ತು ಕೃಷಿ ಕಾರ್ಮಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಹೋರಾಟವನ್ನು ಯಶಸ್ವಿಗೊಳಿಸಬೇಕು ಎಂದು ಮಲ್ಲನಗೌಡ ಅಂಚೆಸಗೂರು ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಸಂಘಟನೆಯ ತಾಲೂಕು ಕಾರ್ಯದರ್ಶಿ ದುರ್ಗಣ್ಣ ಅಡಕಲಗುಡ್ಡ, ಹುಸೇನಪ್ಪ ಚಿಂಚೋಡಿ, ಮಹಮ್ಮದ್ ಸಾಬ್ ಕಕ್ಕಲದಡ್ಡಿ ಹಾಗೂ ನಾಗರಾಜ ಹಿರೇರಾಯಕುಂಪಿ ಉಪಸ್ಥಿತರಿದ್ದರು.

ಮಮದಾಪುರದಲ್ಲಿ ಪುನೀತ್ ರಾಜ್‌ಕುಮಾರ್ ಪುಣ್ಯಸ್ಮರಣೆ: ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನ



ರಾಯಚೂರು: ತಾಲೂಕಿನ ಮಮದಾಪುರ ಗ್ರಾಮದಲ್ಲಿ ಅಪ್ಪು ಸರ್ ಸೇವಾ ಸಮಿತಿ ಹಾಗೂ ಸಿದ್ದು ಸೂರ್ಯವಂಶಿ ಗೆಳೆಯರ ಬಳಗದ ನೇತೃತ್ವದಲ್ಲಿ ಅಕ್ಟೋಬರ್ 29ರಂದು ಸಂಜೆ ಕರ್ನಾಟಕ ರತ್ನ, ಪವರ್ ಸ್ಟಾರ್ ಪುನೀತ್ ರಾಜ್ ಕುಮಾರ್ ಅವರ 5ನೇ ವರ್ಷದ ಪುಣ್ಯಸ್ಮರಣೆ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಾಧಕರನ್ನು ಸನ್ಮಾನಿಸುವ ಮೂಲಕ ಅರ್ಥಪೂರ್ಣ ಕಾರ್ಯಕ್ರಮ ಆಯೋಜಿಸಲಾಯಿತು.

ಕಿಲ್ಲೇ ಬೃಹನ್ಮಠದ ಪೂಜ್ಯ ಶ್ರೀ ಶಾಂತಮಲ್ಲ ಶಿವಾಚಾರ್ಯ ಸ್ವಾಮೀಜಿಯವರ ಆಶೀರ್ವಾದದೊಂದಿಗೆ ಮಠದ ಪ್ರಧಾನ ಕಾರ್ಯದರ್ಶಿ ವೇದಮೂರ್ತಿ ರೇಣುಕಾರಾಧ್ಯಯ್ಯ ಸ್ವಾಮೀಜಿ ದೀಪ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ರೂಪ ಶ್ರೀನಿವಾಸ ನಾಯಕ, ಮಮದಾಪುರ ಗ್ರಾಮವು ಮಮತೆಯ ಹಾಗೂ ಸಾಂಸ್ಕೃತಿಕ ಪರಂಪರೆಯ ಗ್ರಾಮವಾಗಿದೆ. ಇಲ್ಲಿ ಶರನ್ನವರಾತ್ರಿ ಉತ್ಸವವನ್ನು ವಿಜೃಂಭಣೆಯಿಂದ ಆಚರಿಸುವುದರ ಜೊತೆಗೆ ಯುವಕರಲ್ಲಿ ಧಾರ್ಮಿಕ ಜಾಗೃತಿ ಮೂಡಿಸಿ, ದುಶ್ಚಟಗಳಿಂದ ದೂರವಿರುವಂತೆ ಪ್ರೇರೇಪಿಸಲಾಗುತ್ತಿದೆ. ಶಾಂಭವಿ ಮಾಲಾಧಾರಣೆಯ ಮೂಲಕ ಯುವಕರಿಗೆ ಶಿವಧ್ಯಾನ, ಶಿವಚಿಂತನೆ ಹಾಗೂ ಸನ್ಮಾರ್ಗದ ಮಹತ್ವ ತಿಳಿಸುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದು ಹೇಳಿದರು.

ಪುನೀತ್ ರಾಜ್‌ಕುಮಾರ್ ಅವರು ಕೇವಲ ಚಿತ್ರನಟರಾಗಿ ಮಾತ್ರವಲ್ಲದೆ, ಮಾನವೀಯ ಮೌಲ್ಯಗಳು ಮತ್ತು ಸಮಾಜಸೇವೆಯ ಮೂಲಕ ಜನಮಾನಸದಲ್ಲಿ ಶಾಶ್ವತ ಸ್ಥಾನ ಪಡೆದಿದ್ದಾರೆ. ಅವರ ಪುಣ್ಯಸ್ಮರಣೆಯ ಸಂದರ್ಭದಲ್ಲಿ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ಸಾಧಕರನ್ನು ಗುರುತಿಸಿ ಗೌರವಿಸುತ್ತಿರುವುದು ಯುವಜನತೆಗೆ ಮಾದರಿಯಾಗಿದೆ. 'ಗೊಂಬೆ ಹೇಳುತೈತೆ, ಮತ್ತೆ ಹೇಳುತೈತೆ, ನೀನೇ ರಾಜಕುಮಾರ' ಎಂಬ ಹಾಡಿನ ಸಾಲುಗಳನ್ನು ಸ್ಮರಿಸಿದ ಅವರು, ಪುನೀತ್ ಅವರ ಜೀವನ ಮತ್ತು ಆದರ್ಶಗಳು ಯುವಕರಿಗೆ ಸದಾ ಸ್ಫೂರ್ತಿಯಾಗಬೇಕು ಎಂದು ತಿಳಿಸಿದರು.

ಯರಗೇರಾ ಪೊಲೀಸ್ ಠಾಣೆಯ ಪಿಎಸ್‌ಐ ಪ್ರಕಾಶ ಡಂಬಾಳ ಮಾತನಾಡಿ, ಇಂದಿನ ಯುವಜನತೆ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಮೊಬೈಲ್ ಫೋನ್ ಹಾಗೂ ಸಾಮಾಜಿಕ ಜಾಲತಾಣಗಳ ಅತಿಯಾದ ಬಳಕೆಯಿಂದ ವಿದ್ಯಾರ್ಥಿಗಳು ಓದು ಮತ್ತು ಉತ್ತಮ ಹವ್ಯಾಸಗಳಿಂದ ವಿಮುಖರಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಫೇಸ್ ಬುಕ್, ಇನ್‌ಸ್ಟಾಗ್ರಾಮ್ ಹಾಗೂ ರೀಲ್ಸ್‌ಗಳ ವ್ಯಾಮೋಹಕ್ಕೆ ಒಳಗಾಗದೆ ಪುಸ್ತಕ ಓದುವ ಅಭ್ಯಾಸ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಮದ್ಯಪಾನ, ಅಫೀಮು, ಗಾಂಜಾ ಸೇರಿದಂತೆ ಮಾದಕ ವಸ್ತುಗಳ ಸೇವನೆಯಿಂದ ಯುವಜನರ ಭವಿಷ್ಯ ಹಾಳಾಗುವುದಲ್ಲದೆ ಅಪರಾಧ ಚಟುವಟಿಕೆಗಳಿಗೂ ದಾರಿಯಾಗುವ ಅಪಾಯವಿದೆ. ಈ ಹಿನ್ನೆಲೆಯಲ್ಲಿ ಪಾಲಕರು ಮಕ್ಕಳ ಚಟುವಟಿಕೆಗಳ ಬಗ್ಗೆ ನಿಗಾ ವಹಿಸಿ, ಉತ್ತಮ ಶಿಕ್ಷಣ ಮತ್ತು ಸಂಸ್ಕಾರ ನೀಡಲು ಮುಂದಾಗಬೇಕು. ಪ್ರತಿಯೊಬ್ಬರೂ ಪುನೀತ್ ರಾಜ್‌ಕುಮಾರ್ ಅವರಷ್ಟು ಸಮಾಜಸೇವೆ ಮಾಡಲು ಸಾಧ್ಯವಾಗದಿದ್ದರೂ ಅವರ ಸರಳತೆ, ಮಾನವೀಯತೆ, ಶಿಸ್ತು ಹಾಗೂ ಸೇವಾ ಮನೋಭಾವವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬಹುದು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಡಾ. ಮುರಳಿ ರಾವ್ ಶಿಂಧೆ, ಯರಗೇರಾ ಪಿಎಸ್‌ಐ ಪ್ರಕಾಶ ಡಂಬಾಳ, ಎಎಸ್‌ಐ ಶಿವಾಜಿ ಡೋಣಿ, ಓಂಕಾರ್ ಯಾದವ್, ರಾಜೇಂದ್ರ ಶಿವಾಳೆ, ಸಂಧ್ಯಾ ನಾಯಕ, ನರಸಿಂಹಲು ಮಡಿವಾಳ, ಗುರುರಾಜ್ ಪೊನ್ನೂರು, ಸಂತೋಷ್, ಮರೆಪ್ಪ ನಾಯಕ, ಪೊಲೀಸ್ ಕಾನ್‌ಸ್ಟೆಬಲ್ ಶಂಕ್ರಪ್ಪ, ಭಾಗ್ಯ ಕನ್ನಡತಿ ಸೇರಿದಂತೆ ಹಲವು ಸಾಧಕರನ್ನು ಶಾಲು ಹೊದಿಸಿ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಪುನೀತ್ ರಾಜ್ ಕುಮಾರ್ ಅವರ ಸಮಾಜಮುಖಿ ಕಾರ್ಯಗಳು, ಮಾನವೀಯ ಸೇವೆ ಹಾಗೂ ಯುವಜನತೆಗೆ ನೀಡಿದ ಪ್ರೇರಣೆಯನ್ನು ಸ್ಮರಿಸಲಾಯಿತು. ಸಾಧಕರನ್ನು ಗುರುತಿಸಿ ಗೌರವಿಸುವ ಮೂಲಕ ಸಮಾಜದಲ್ಲಿ ಸೇವಾ ಮನೋಭಾವ ಬೆಳೆಸುವ ಉದ್ದೇಶವನ್ನು ಆಯೋಜಕರು ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಅಪ್ಪು ಸರ್ ಸೇವಾ ಸಮಿತಿಯ ಪದಾಧಿಕಾರಿಗಳು, ಸಿದ್ದು ಸೂರ್ಯವಂಶಿ ಗೆಳೆಯರ ಬಳಗದ ಸದಸ್ಯರು, ಗ್ರಾಮದ ಮುಖಂಡರು, ಹಿರಿಯರು, ಗಣ್ಯರು, ಪುನೀತ್ ರಾಜ್‌ಕುಮಾರ್ ಅಭಿಮಾನಿಗಳು ಹಾಗೂ ಯುವಕರು ಉಪಸ್ಥಿತರಿದ್ದರು.

ಹಗಲಿನಲ್ಲಿ ವಿದ್ಯುತ್ ಪೂರೈಕೆಗೆ ಆಗ್ರಹಿಸಿ ರೈತರಿಂದ ಪ್ರತಿಭಟನೆ

ಕವಿತಾಳ, ಅ. 30- ರೈತರ ಪಂಪ್ ಸೆಟ್‌ಗಳಿಗೆ ರಾತ್ರಿ ಸಮಯದಲ್ಲಿ ನೀಡುತ್ತಿರುವ ವಿದ್ಯುತ್ ಪೂರೈಕೆ ಸಮಯ ಬದಲಾವಣೆ ಮಾಡಿ ಹಗಲಿನಲ್ಲಿ ಪೂರೈಕೆ ಮಾಡಿ ಎಂದು ಆಗ್ರಹಿಸಿ ಪಟ್ಟಣದ ಜೆಸ್ಕಾಂ ಕಚೇರಿ ಮುಂದೆ ರೈತರು ಆಕ್ರೋಶ ವ್ಯಕ್ತಪಡಿಸಿ ಪ್ರತಿಭಟನೆ ನಡೆಸಿದರು.



ಬರಗಾಲ ಪರಿಸ್ಥಿತಿ ಉಂಟಾಗಿರುವುದರಿಂದ ಇದ್ದ ಕೊಳವೆ ಬಾವಿಗಳಲ್ಲಿ ನೀರು ಕಡಿಮೆಯಾಗಿದ್ದು, ಇದ್ದ ನೀರನ್ನು ಬಳಸಿಕೊಳ್ಳಲು ರಾತ್ರಿ ಸಮಯದಲ್ಲಿ ವಿದ್ಯುತ್ ನೀಡುತ್ತಿರುವುದರಿಂದ ಸರಿಯಾಗಿ ನೀರು ಬಳಸಿಕೊಳ್ಳಲು ಸಾಧ್ಯವಾಗುತ್ತಿಲ್ಲ. ರಾತ್ರಿ 10 ಗಂಟೆಯಿಂದ ಬೆಳಗಿನ ಜಾವ 4 ಗಂಟೆವರೆಗೂ ವಿದ್ಯುತ್ ಪೂರೈಕೆ ಆಗುತ್ತಿರುವುದರಿಂದ ರಾತ್ರಿ ಸಮಯದಲ್ಲಿ ಸೊಳ್ಳೆಗಳ ಕಾಟ ಹಾಗೂ ವಿಷ ಜಂತುಗಳ ಹಾವಳಿಗೆ ಭಯಭೀತಿಯಿಂದ ರೈತರು ನೀರು ಹಾಯಿಸುವಂತಾಗಿದೆ.

ಇತ್ತೀಚಿಗೆ ರಾತ್ರಿ ಸಮಯದಲ್ಲಿ ವಿಷ ಜಂತುಗಳ ಕಚ್ಚುವಿಕೆಯಿಂದ ಹಲವಾರು ಪ್ರಕರಣಗಳು ಜರುಗಿದ್ದು, ರೈತರು ಆತಂಕ ಕೊಳಗಾಗಿದ್ದಾರೆ. ಆದ್ದರಿಂದ ಅಧಿಕಾರಿಗಳು ಇದನ್ನು ಗಂಭೀರವಾಗಿ ಪರಿಗಣಿಸಿ ಹಗಲಿನಲ್ಲಿ ಬೆಳಿಗ್ಗೆ 9 ರಿಂದ ಸಂಜೆ 4 ಗಂಟೆಯವರೆಗೆ 7 ತಾಸು ವಿದ್ಯುತ್ ಪೂರೈಕೆ ಮಾಡಬೇಕೆಂದು ರೈತ ಮೌನೇಶ್ ಹಿರೇಕುರುಬರ್ ಒತ್ತಾಯಿಸಿದರು.

ಪ.ಪಂ. ಮಾಜಿ ಸದಸ್ಯ ಗಂಗಪ್ಪ ದಿನ್ನಿ ಜೆಸ್ಕಾಂ ಎಇಇ ಅವರನ್ನು ದೂರವಾಣಿ ಮೂಲಕ ಸಂಪರ್ಕಿಸಿ ರೈತರ ಸಮಸ್ಯೆ ಕುರಿತು ಮಾಹಿತಿ ನೀಡಿದರು. ಮತ್ತು ಹಗಲಿನಲ್ಲಿ ವಿದ್ಯುತ್ ಪೂರೈಸುವಂತೆ ಒತ್ತಾಯಿಸಿದರು. ಜೆಸ್ಕಾಂ ಇಲಾಖೆ ಅಧಿಕಾರಿ ಜೆ ಇ ಜಲಾಲಿ ಮಾತನಾಡಿ, ಇನ್ನು ಮೂರು ದಿನದಲ್ಲಿ ಸಮಸ್ಯೆಯನ್ನು ಸರಿಪಡಿಸಿ ಹಗಲು ವೇಳೆ ವಿದ್ಯುತ್ ನೀಡಲಾಗುವುದು ಎಂದು ತಿಳಿಸಿದರು. ಅಧಿಕಾರಿಗಳ ಭರವಸೆ ಮೇರೆಗೆ ರೈತರು ಪ್ರತಿಭಟನೆ ಕೈಬಿಟ್ಟರು. ಒಂದು ವೇಳೆ ಮೂರು ದಿನದಲ್ಲಿ ಸಮಸ್ಯೆ ಸರಿಪಡಿಸದಿದ್ದರೆ ಜೆಸ್ಕಾಂ ಕಚೇರಿಗೆ ಮುತ್ತಿಗೆ ಹಾಕಿ, ಉಗ್ರವಾದ ಪ್ರತಿಭಟನೆ ಮಾಡಲಾಗುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರೈತರಾದ ರಫಿ ಒಂಟಿಬಂಡಿ, ರಾಜಾಸಾಬ್ ಮುಲ್ಲ, ಶಾಲಂ, ಮುಸ್ತಫಾ ಒಂಟಿಬಂಡಿ, ಮೌಲಸಾಬ್, ಸೈಯದ್, ಹಾಜಿ ಬಾಬು, ಮಾಳಪ್ಪ ಯಾದವ, ಗಂಗಪ್ಪ ಚಲುವಾದಿ, ಕರಿಯಪ್ಪ ಕಬ್ಬೆರ, ರಾಜಾಸಾಬ್ ಚಿಂಚರಕಿ, ಆದಪ್ಪ ಹೀರಾ, ಖಾಜಾ ಬುಡ್ಡ ಕುಂಟಲ್ಲಿ, ರಂಗಪ್ಪ ಸೇರಿದಂತೆ ಇನ್ನಿತರ ರೈತರು ಹಾಜರಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K